ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 12 | PAGE- ಪುಟ 8 | ಗುರುವಾರ 13.02.2025 | RS.ಬೆಲೆ 2/-

# ಮೈಕ್ರೋ ಫೈನಾನ್ಸ್ ಕಿರುಕುಳ

## ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ



ಮೈಕ್ರೋ ಫೈನಾನ್ಸ್ ಕಂಪೆನಿಗಳು ಸಾಲ ವಸೂಲಿಯ ನೆಪದಲ್ಲಿ ಸಾಲ ಪಡೆದವರಿಗೆ ನೀಡುತ್ತಿರುವ ಕಿರುಕುಳವನ್ನು ತಡೆಯಲು ರೂಪಿಸಲಾದ ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ ದೊರೆತಿದೆ ಎಂದು ಮುಖ್ಯಮಂತ್ರಿ ಟ್ವೀಟ್ ಮಾಡಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.12:ಸಾಲಗಾರರಿಗೆ ಮೈಕ್ರೋಫೈನಾನ್ಸ್‌ನೀಡುತ್ತಿರುವ ಕಿರುಕುಳ ತಪ್ಪಿಸಲು ರಾಜ್ಯ ಸರ್ಕಾರದ ಸುಗ್ರಿವಾಜ್ಞೆಗೆ ರಾಜ್ಯಪಾಲರು ಇಂದು ಅಂಕಿತ ಹಾಕಿದ್ದಾರೆ.

ಈ ಬಗ್ಗೆ ಕೆಲವೊಂದು ಸಲಹೆಗಳನ್ನು ನೀಡಿರುವ ರಾಜ್ಯಪಾಲರು, ವಿಧಾನ ಮಂಡಲ ಅಧಿವೇಶನದಲ್ಲಿ ಚರ್ಚಿಸುವಂತೆ ಸೂಚಿಸಿದ್ದಾರೆ.


ಮೈಕ್ರೋ ಫೈನಾನ್ಸ್? ಕಿರುಕುಳಕ್ಕೆ ಅಂಕುಶ ಹಾಕಲು ಸರ್ಕಾರ ಸುಗ್ರೀವಾಜ್ಞೆ ಮೊರೆ ಹೋಗಿತ್ತು. ಕಠಿಣ ಕಾನೂನು ರೂಪಿಸಿ ರಾಜ್ಯಪಾಲರಿಗೆ ರವಾನಿಸಿದ್ದರು.

ಬಜೆಟ್ ಅಧಿವೇಶನದಲ್ಲಿ ಮೈಕ್ರೋಫೈನಾನ್ಸ್ ಸುಗ್ರೀವಾಜ್ಞೆ ಸಾಧಕ ಬಾಧಕದ ಬಗ್ಗೆ ಚರ್ಚೆ ನಡೆಸುವಂತೆ ಹೇಳಿದ್ದ ರಾಜ್ಯಪಾಲರು, ಈಗಿರುವ ಕಾನೂನುಗಳಲ್ಲೇ ಪೊಲೀಸರು ಸರಿಯಾದ ಕ್ರಮಕೈಗೊಳ್ಳುತ್ತಿಲ್ಲ ಎಂದು ಪೊಲೀಸ್ ವ್ಯವಸ್ಥೆ ಬಗ್ಗೆಯೂ ಅಸಮಾಧನ ಹೊರಹಾಕಿದ್ದರು. ಮೈಕ್ರೋ ಫೈನಾನ್ಸ್ ವಿರುದ್ಧ ಮತ್ತೊಂದು ಕಾನೂನಿನ ಅಗತ್ಯತೆ ಕಾಣುತ್ತಿಲ್ಲ ಖಡಕ್ ಸಂದೇಶ ರವಾನಿಸಿ ಸುಗ್ರೀವಾಜ್ಞೆ ವಾಪಸ್ ಮಾಡಲಾಗಿತ್ತು.



ಬೀದರ:ಕರ್ನಾಟಕ ಸರ್ಕಾರವು ಬೀದರ್ ಜನಪ್ರಿಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ್ ಬಿ ಪಾಟೀಲ್ ರವರಿಗೆ ಇಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಏಏಖಆಃ) ಕಲಬುರಗಿಯ ನೂತನ ಸದಸ್ಯರಾಗಿ ನೇಮಿಸಿದ ಪ್ರಯುಕ್ತ ಬೀದರನಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ ಖಂಡ್ರೆ ದಂಪತಿಗಳಿಗೆ ಹೂಗುಚ್ಛ ನೀಡಿ ಸನ್ಮಾನಿಸಿ ಗೌರವಿಸಿದರು.

## ಶೀಘ್ರ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರ ನೇಮಕ:ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.12–ದೇಶಾದ್ಯಂತ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರ ನೇಮಕಾತಿ ಪ್ರಕ್ರಿಯೆ ಹಂತಹಂತವಾಗಿ ಕೈಗೊಳ್ಳಲಾಗುತ್ತಿದೆ ಎಂದು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದರು. ಇಲ್ಲಿನ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಮೂರು ರಾಜ್ಯಗಳಲ್ಲಿ ಪಿಸಿಸಿ ಅಧ್ಯಕ್ಷರ ನೇಮಕ ಮಾಡಲಾಗಿದೆ. ಆದಷ್ಟು ಬೇಗ ಹಂತಹಂತವಾಗಿ ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ನೇಮಕ ನಡೆಯಲಿದೆ. ಇದ–ಕ್ಕೆ ಕರ್ನಾಟಕ ಹೊರತಾಗಿಲ್ಲ ಎಂದರು. ನಿನ್ನೆಯಷ್ಟೇ ಒಡಿಸ್ಸಾ ರಾಜ್ಯ ಪಿಸಿಸಿ ಅಧ್ಯಕ್ಷರ ನೇಮಕ ಮಾಡಲಾಗಿದೆ, ಅಲ್ಲಿ ಹಿಂದುಳಿದ ವರ್ಗದವರನ್ನು ನೇಮಕ ಮಾಡಲಾಗಿದೆ. ಇನ್ನೆರಡು

(2ನೇ ಪುಟ ನೋಡಿ)

## ಉಚಿತ ಯೋಜನೆಗಳಿಂದ ಜನ ಕಷ್ಟಪಟ್ಟು ಕೆಲಸ ಮಾಡ್ತಿಲ್ಲ: ಸುಪ್ರೀಂ ಅಸಮಾಧಾನ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಫೆ.12:ಚುನಾವಣೆಗೆ ಮುಂಚಿತವಾಗಿ ರಾಜಕೀಯ ಪಕ್ಷಗಳು ಉಚಿತ ಕೊಡುಗೆಗಳನ್ನು ಘೋಷಿಸುವ ಪದ್ಧತಿಯಿಂದ ನಾವು ?ಪರಾವಲಂಬಿಗಳ ವರ್ಗ'ಸೃಷ್ಟಿಸುತ್ತಿಲ್ಲವೇ ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿದೆ.

ನಗರ ಪ್ರದೇಶಗಳಲ್ಲಿ ನಿರಾಶ್ರಿತ ವ್ಯಕ್ತಿಗಳ ಆಶ್ರಯ ಹಕ್ಕಿನ ಕುರಿತಾದ ವಿಷಯವನ್ನು ನ್ಯಾಯಮೂರ್ತಿ ಬಿ.ಆರ್. ಗವಾಯಿ ಮತ್ತು ಎ.ಜಿ. ಮಸಿಹ್ ಅವರಿದ್ದ ದ್ವಿಸದಸ್ಯ ಪೀಠ ಆಲಿಸಿತು. ಈ ವೇಳೆ, ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಯ ಭಾಗವಾಗಲು ಉತ್ತೇಜಿಸುವ ಬದಲು,ನಾವು ಪರಾವಲಂಬಿಗಳ ವರ್ಗವನ್ನು ಸೃಷ್ಟಿಸುತ್ತಿಲ್ಲವೇ ಎಂದು ಪ್ರಶ್ನಿಸಿತು.

ಮಹಾರಾಷ್ಟ್ರದ "ಲಡ್ಕಿ ಬಹಿನ್' ಯೋಜನೆಯನ್ನು ಉಲ್ಲೇಖಿಸಿ,

(2ನೇ ಪುಟ ನೋಡಿ)


## ಮಾಣಿಕನಗರದ ದತ್ತಲೋಕ ವೀಕ್ಷಿಸಲು ಅಗಮಿಸುತ್ತಿರುವ ಶಾಲಾ ವಿದ್ಯಾರ್ಥಿಗಳು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಇಲ್ಲಿನ ಐತಿಹಾಸಿಕ ದೇವಸ್ಥಾನವಾದ ಶ್ರೀ ಮಾಣಿಕಪ್ರಭು ದೇವಸ್ಥಾನದಲ್ಲಿ ಶ್ರೀ ಡಾ.ಜ್ಞಾನರಾಜ ಪ್ರಭುಗಳು ಭಕ್ತರಿಗಾಗಿ ದತ್ತಲೊಕವನ್ನು ನಿರ್ಮಾಣ ಮಾಡಿದ್ದಾರೆ. ಈ ಪುಣ್ಯಕ್ಷೇತ್ರದ ದತ್ತ ಲೋಕವನ್ನು ವಿಕ್ಷಿಸಲು. ಬೀದರ್ ಜಿಲ್ಲೆ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಶಾಲಾ ವಿದ್ಯಾರ್ಥಿಗಳು ಅಗಮಿಸಿ ದೇವರ ದರುಶನ ಪಡೆಯುತ್ತಿದ್ದಾರೆ. ಇಲ್ಲಿನ ವಿದ್ಯುತ್ ದೀಪಗಳು. ರಸ ಮಂಜರಿ, ಸೇರಿದಂತೆ ಇತರೆ ಭವ್ಯವಾದ ವಿವಿಧ ದೇವತೆಗಳ ಕಂಚಿನ ಮೂರ್ತಿಗಳನ್ನು ಹೀಗೆ ಹತ್ತು ಹಲವಾರು ಬಗೆಯ ಚಿತ್ರಗಳನ್ನು ವಿಕ್ಷಿಸುವುದರ ಮೂಲಕ ವಿದ್ಯಾರ್ಥಿಗಳಿಗೆ ಅಕರ್ಷಿಸುತ್ತಿದೆ. ರಾಜ್ಯ ಸೇರಿದಂತೆ ವಿವಿಧ ರಾಜ್ಯದ ಭಕ್ತರು ಕೂಡ ಶ್ರೀ ಮಾಣಿಕ ಪ್ರಭುಗಳ ದೇವಸ್ಥಾನಕ್ಕೆ ಅಗಮಿಸುತ್ತಿದ್ದು. ಮಾಣಿಕನಗರ ಗ್ರಾಮವು ಭಕ್ತರಿಂದ ತುಂಬಿ ತುಳುಕುತ್ತಿದೆ.

## ವಿದ್ಯಾರ್ಥಿಗಳು ಪುಸ್ತಕ ಓದಿ ಜ್ಞಾನ ಸಂಪಾದಿಸಿ : ಸಚಿವ ಈಶ್ವರ್ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.12:ವಿದ್ಯಾರ್ಥಿಗಳು ದಿನನಿತ್ಯಗ್ರಂಥಾಲಯದಲ್ಲಿನ ಪುಸ್ತಕ ಓದಿ ಜ್ಞಾನ ಸಂಪಾದಿಸುವ ಮೂಲಕ ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಇಂದು ನಗರದಲ್ಲಿ 2022–23ನೇ ಸಾಲಿನ ಕೆ ಕೆ ಆರ್ ಡಿ ಬಿ ಮ್ಯಾಕ್ರೊ ಯೋಜನೆ ಅಡಿಯಲ್ಲಿ 2.5 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿದ ಜಿಲ್ಲಾ ಕೇಂದ್ರ ಗ್ರಂಥಾಲಯದ ನೂತನ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ಜ್ಞಾನವೇ ಸಂಪತ್ತು. ಜ್ಞಾನ ಗಳಿಸಲು ವಿದ್ಯಾರ್ಥಿಗಳು ಪುಸ್ತಕ, ಪತ್ರಿಕೆ, ನಿಯತಕಾಲಿಕೆಗಳನ್ನು ಓದಬೇಕು. ಶೈಕ್ಷಣಿಕ ಅಭ್ಯಾಸದ ಜೊತೆ ಇತರೇ ಜ್ಞಾನವನ್ನು ಸಹ ಗಳಿಸಬೇಕು. ಗ್ರಂಥಾಲಯದಲ್ಲಿ ಒಟ್ಟು 10

(2ನೇ ಪುಟ ನೋಡಿ)

## ಮಾ.8 ರಂದು ಬೃಹತ್ ಲೋಕ ಅದಾಲತ್: ನ್ಯಾ.ಪ್ರಕಾಶ ಬನಸೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.12: ಗೌರವಾನ್ವಿತ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮಾರ್ಚ.8 ರಂದು ಬೀದರ ಜಿಲ್ಲೆಯಲ್ಲಿ ಬೃಹತ್ ಲೋಕ ಅದಾಲತನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಹೇಳಿದರು.

ಅವರು ಇಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ ಪ್ರಕರಣಗಳು, ಕಾರ್ಮಿಕರ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಜೀವನಾಂಶ, ಚೆಕ್ ಬೌನ್ಸ, ವಿದ್ಯುತ್ ಪ್ರಕರಣಗಳು ಕಂದಾಯ ಅಪರಾಧಿತ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ. ಇದರ ಸದುಪಯೋಗವನ್ನು ಜಿಲ್ಲೆಯ ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಹಿಂದೆ ದಿನಾಂಕ 14–12–2024 ರಂದು ರಾಷ್ಟ್ರೀಯ ಲೋಕ ಅದಾಲತನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಾದ್ಯಾಂತ ಒಟ್ಟು 73,628 ಪ್ರಕರಣಗಳನ್ನು ಲೋಕ ಆದಲಾತನಲ್ಲಿ ಇತ್ಯರ್ಥಗೊಳಿಸಲಾಗಿರುತ್ತದೆ. ಒಟ್ಟು 10.191(ಪೆಂಡಿಂಗನಲ್ಲಿನ) ಪ್ರಕರಣಗಳು ಹಾಗೂ 63,437 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿರುತ್ತದೆ

(2ನೇ ಪುಟ ನೋಡಿ)



# ಒಂದನೇ ಪುಟದಿಂದ

## ಓದಿ ಜ್ಞಾನ ಸಂಪಾದಿಸಿ : ಸಚಿವ ಈಶ್ವರ್ ಖಂಡ್ರೆ

ಲಕ್ಷ ರೂ. ವಿವಿಧ ವಿಷಯಗಳ ಪುಸ್ತಕಗಳಿದ್ದು, ತಾಲ್ಲೂಕು ಮಟ್ಟದ ಗ್ರಂಥಾಲಯಗಳಿಗೆ ಕಳಿಸಲಾಗುತ್ತದೆ ಎಂದರು. ಇಂದು ಜಗತ್ತು ಒಂದು ಹಳ್ಳಿಯಾಗಿದೆ. ಅಧುನಿಕ ವಿಜ್ಞಾನ, ತಂತ್ರಜ್ಞಾನ, ಮಾಹಿತಿ ತಂತ್ರಜ್ಞಾನದ ಪರಿಣಾಮವಾಗಿ ಯುವಕರು ಸಾಮಾಜಿಕ ಜಾಲತಾಣದಲ್ಲೇ ಹೆಚ್ಚು ಸಮಯ ಕಳೆಯುತ್ತಿದ್ದಾರೆ. ಫೇಸ್ಬುಕ್, ಇನಸ್ಟಾಗ್ರಾಂ, ಟ್ವಿಟರ್ ಗಳಲ್ಲಿ ರೀಲ್ಸ್ ಗಳನ್ನೇ ವೀಕ್ಷಿಸುತ್ತಿದ್ದಾರೆ. ಇದು ಆರೋಗ್ಯಕ್ಕೆ ಹಾನಿಕಾರಕ. ಪುಸ್ತಕ ಓದುವುದರಿಂದ ಹೆಚ್ಚಿನ ಜ್ಞಾನ ಗಳಿಸಿ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರತಿದಿನ 500–600 ವಿದ್ಯಾರ್ಥಿಗಳು ಗ್ರಂಥಾಲಯಕ್ಕೆ ಭೇಟಿ ನೀಡುತ್ತಾರೆ. ಮುಂಬರುವ ದಿನಗಳಲ್ಲಿ ಇಲ್ಲಿ ಡಿಜಿಟಲ್ ಗ್ರಂಥಾಲಯ ಸ್ಥಾಪಿಸಲು ಕ್ರಮಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್, ನಗರಸಭೆ ಅಧ್ಯಕ್ಷ ಮಹ್ಮದ್ ಗೌಸ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಶಿವಕುಮಾರ್ ಶಾಮಶೆಟ್ಟಿ, ಜಿಲ್ಲಾ ಕೇಂದ್ರದ ಮುಖ್ಯ ಗ್ರಂಥಾಲಯ ಅಧಿಕಾರಿ ಸಿದ್ದಾರ್ಥ ಭಾವಿಕಟ್ಟಿ ಹಾಗೂ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯ ಅಧಿಕಾರಿ ಸವಿತಾ ಎನ್.ಎಮ್ ಸೇರಿದಂತೆ ಇತರ ಸಿಬ್ಬಂದಿ ಉಪಸ್ಥಿತರಿದ್ದರು.

## ಕಾಂಗ್ರೆಸ್ ಅಧ್ಯಕ್ಷರ ನೇಮಕ:ಖರ್ಗೆ

ದಿನಗಳಲ್ಲಿ ಇನ್ನೆರಡು ರಾಜ್ಯಗಳ ಪಿಸಿಸಿ ಅಧ್ಯಕ್ಷರ ನೇಮಕ ಮಾಡಲಾಗುವುದು. ಮುಂದಿನ 8 ದಿನಗಳಲ್ಲಿ ಉಳಿದ ರಾಜ್ಯಗಳ ಪಿಸಿಸಿ ಅಧ್ಯಕ್ಷರ ನೇಮಕ ಪ್ರಕ್ರಿಯೆ ನಡೆಯಲಿದೆ ಎಂದರು.

ಇತ್ತೀಚೆಗೆ ದೆಹಲಿಯ ತಮ್ಮ ನಿವಾಸದಲ್ಲಿ ರಾಜ್ಯದ ಗೃಹ ಸಚಿವ ಡಾ.ಜಿ.ಪರಮೇಶ್ವರ ಹಾಗೂ ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ತಮ್ಮನ್ನು ಭೇಟಿ ಮಾಡಿ ಚರ್ಚಿಸಿದ ಕುರಿತು ಸುದ್ದಿಗಾರರು ಪ್ರಸ್ತಾಪಿಸಿದಾಗ, 'ನಾನು ಈ ರಾಜ್ಯದವನು ಎಐಸಿಸಿ ಅಧ್ಯಕ್ಷನಾಗಿದ್ದೇನೆ. ಹೀಗಾಗಿ ನಮ್ಮ ರಾಜ್ಯದ ನಾಯಕರು ನನ್ನ ಭೇಟಿಯಾಗೋಕೆ ಬರುತ್ತಾರೆ.

ನಮ್ಮ ಜೊತೆ ಆತ್ಮೀಯರಾಗಿ ಇರುವವರು ಫೋನ್ ಮಾಡಿ ಬರುತ್ತಾರೆ. ಹಾಗೆ ಬರುವವರನ್ನು ಬೇಡ ಅನ್ನೋಕ್ಕಾಗುತ್ತಾ? ಬೇಡ ಅನ್ನೋಕ್ಕಾಗುತ್ತಾ..? ಅದರಲ್ಲೇನೂ ವಿಶೇಷ ಇಲ್ಲ. ಪರಮೇಶ್ವರ, ಜಾರಕಿಹೊಳಿ ಭೇಟಿ ಬಗ್ಗೆ ಗೊಂದಲ ಸೃಷ್ಟಿ ಮಾಡೋದು ಬೇಡ. ದಯವಿಟ್ಟು ಮಾಧ್ಯಮದವರು ಗೊಂದಲ ಸೃಷ್ಟಿ ಮಾಡಬೇಡಿ' ಎಂದು ಮನವಿ ಮಾಡಿದರು.

ಆಮಂತ್ರಣ ಇರಲಿಲ್ಲಡೊನಾಲ್ಡ್ ಟ್ರಂಪ್ ಅಮೆರಿಕ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಭಾರತದ ಪ್ರಧಾನಿ ಮೋದಿಯವರಿಗೆ ಅಮೇರಿಕಕ್ಕೆ ಬರುವಂತೆ ಆಮಂತ್ರಣವೇ ಇರಲಿಲ್ಲ. ಆದರೂ ಮೋದಿ ಅಮೆರಿಕಾಕ್ಕೆ ಹೋಗಿದ್ದಾರೆ ಎಂದು ಮಲ್ಲಿಕಾರ್ಜುನ ಖರ್ಗೆ ಲೇವಡಿ ಮಾಡಿದರು.ಟ್ರಂಪ್ ನನ್ನ ಆತ್ಮೀಯ ಸ್ನೇಹಿತ ಎನ್ನುತ್ತಿದ್ದರು. ಆದರೆ, ಭಾರತದ ವಲಸಿಗರನ್ನು ಟ್ರಂಪ್ ಗೂಡ್ಸ್ ವಿಮಾನದಲ್ಲಿ ಕಳುಹಿಸಿದ್ದಾರೆ. ಕೊನೆಯ ಪಕ್ಷ ಪ್ಯಾಸೆಂಜರ್ ವಿಮಾನದಲ್ಲಾದರೂ ಕಳುಹಿಸಿಕೊಡಿ ಎಂದು ಮೋದಿ ಮನವಿ ಮಾಡಬಹುದಿತ್ತು ಎಂದರು.

## ಮಾಡ್ತಿಲ್ಲ: ಸುಪ್ರೀಂ ಅಸಮಾಧಾನ

ಇದರ ಅಡಿಯಲ್ಲಿ ವಾರ್ಷಿಕ ಕುಟುಂಬ ಆದಾಯ 2.5 ಲಕ್ಷ ರೂ.ಗಿಂತ ಕಡಿಮೆ ಮತ್ತು ಇತರ ರಾಜ್ಯಗಳಲ್ಲಿ ಆಡಳಿತ ಪಕ್ಷಗಳು ನಡೆಸುವ ಇದೇ ರೀತಿಯ ಕಾರ್ಯಕ್ರಮಗಳಿಂದ ಜನರು ಕೆಲಸ ಮಾಡಲು ಸಿದ್ಧರಿಲ್ಲ. ಅವರು ಯಾವುದೇ ಕೆಲಸ ಮಾಡದೆ ಉಚಿತ ಪಡಿತರ ಮತ್ತು ಹಣವನ್ನು ಪಡೆಯುತ್ತಿದ್ದಾರೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತು.

ಬಡವರ ಬಗ್ಗೆ ಸರ್ಕಾರಗಳ ಕಾಳಜಿಯನ್ನು ನಾವು ತುಂಬಾ ಪ್ರಶಂಸಿಸುತ್ತೇವೆ. ಆದರೆ ಅವರನ್ನು ಸಮಾಜದ ಮುಖ್ಯವಾಹಿನಿಯ ಭಾಗವನ್ನಾಗಿ ಮಾಡಿ ರಾಷ್ಟದ ಅಭಿವೃದ್ಧಿಗೆ ಕೊಡುಗೆ ನೀಡಲು ಅವಕಾಶ ನೀಡುವುದು ಉತ್ತಮವಲ್ಲವೇ ಎಂದು ಪೀಠ ಪ್ರಶ್ನಿಸಿತು.

ಅರ್ಜಿದಾರರಲ್ಲಿ ಒಬ್ಬರ ಪರವಾಗಿ ಹಾಜರಾದ ವಕೀಲ ಪ್ರಶಾಂತ್ ಭೂಷಣ್, ದೇಶದಲ್ಲಿ ಕೆಲಸ ಸಿಕ್ಕರೆ ಮಾಡಲು ಇಷ್ಟಪಡದವರು ಯಾರೂ ಇಲ್ಲ ಎಂದು ಹೇಳಿದರು. ಈ ವೇಳೆ ನ್ಯಾಯಮೂರ್ತಿ ಗವಾಯಿ ಅವರು ನಿಮಗೆ ಏಕಪಕ್ಷೀಯ ಜ್ಞಾನವಿರಬೇಕು, ನಾನು ಕೃಷಿ ಕುಟುಂಬದಿಂದ ಬಂದಿದ್ದೇನೆ. ಚುನಾವಣೆಗೆ ಸ್ವಲ್ಪ ಮೊದಲು ಮಹಾರಾಷ್ಟ್ರದಲ್ಲಿ ಘೋಷಿಸಿದ ಉಚಿತ ಕೊಡುಗೆಗಳಿಂದಾಗಿ, ರೈತರಿಗೆ ಕಾರ್ಮಿಕರೇ ಸಿಗುತ್ತಿಲ್ಲ ಎಂದು ಉದಾಹರಣೆ ನೀಡಿದರು.

ಆರು ವಾರಗಳ ನಂತರ ಈ ವಿಷಯವನ್ನು ವಿಚಾರಣೆಗೆ ತೆಗೆದುಕೊಳ್ಳಲಾಗುವುದು ಎಂದು ನ್ಯಾಯಾಲಯ ತಿಳಿಸಿದೆ.

## ಅದಾಲತ್: ನ್ಯಾ.ಪ್ರಕಾಶ ಬನಸೋಡೆ

ಎಂದರು.ಈ ಬಾರಿ ಲೋಕ ಅದಾಲತನಲ್ಲಿ ನ್ಯಾಯಾಲಯದಲ್ಲಿ ಬಾಕಿ(ಪೇಂಡಿಂಗ) ಇರುವ ಪ್ರಕರಣಗಳನ್ನು ಹೆಚ್ಚು ಹೆಚ್ಚು ಇತ್ಯಾರ್ಥಗೊಳಿಸಲು ಯೋಜನೆ ರೂಪಿಸಲಾಗಿದೆ. ಈ ಬಾರಿಯ ಲೋಕ ಅದಾಲತನಲ್ಲಿ ಹೆಚ್ಚು ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸುವ ಗುರಿ ಹೊಂದಲಾಗಿದೆ. ದಿನಾಂಕ 11–02–2025 ಪ್ರಕಾರ ನಮ್ಮ ಜಿಲ್ಲೆಯಲ್ಲಿ ಒಟ್ಟು 28,781 ಪ್ರಕರಣಗಳು ವೆಂಡಿಂಗ ಇದ್ದು.ಹೆಚ್ಚು ಪ್ರಕರಣಗಳನ್ನು ರಾಜಿ ಮಾಡುವ ಗುರಿ ಹೊಂದಿದ್ದೇವೆಂದರು.

ಪ್ರಕರಣ ರಾಜಿ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಾಲಯ ಶುಲ್ಕ ವಾಪಸ್ ಸಿಗಲಿದೆ ಮೇಲ್ಮನವಿ ಮಾಡಲು ಅವಕಾಶ ಇರುವುದಿಲ್ಲ. ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ ಹಾಗೆ ಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತದೆ. ಕಾರಣ ಮಾರ್ಚ.8 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟೀಯ ಲೋಕ ಆದಾಲತ್ ನಡೆಯಲಿದ್ದು, ಜಿಲ್ಲೆಯ ಹೆಚ್ಚಿನ ಜನರು ಈ ಲೋಕ ಆದಾಲ???ನಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಜಗದೀಶ್ವರ ದೊರೆ, ಆಕಾಶ ಸಜ್ಜನ, ನಾಗರಾಜ, ಪ್ರೀತಿ, ಜೀವನ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಫೆ 15 ರಂದು ಸಂತ ಸೇವಾಲಾಲ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.12: ಸರ್ಕಾರದ ಆದೇಶದಂತೆಪ್ರಸಕ್ತಸಾಲಿನಜಿಲ್ಲಾ ಮಟ್ಟದ"ಶ್ರೀಸಂತಸೇವಾಲಾಲ್" ಜಯಂತಿಯನ್ನುಫೆಬ್ರವರಿ 15 ರಂದು ಹಮ್ಮಿಕೊಳ್ಳಲಾಗಿದೆ. ಎಲ್ಲಾ ಇಲಾಖೆಗಳು ತಮ್ಮ ಕಾಂಯರ್ಾಲಂಯುದಲ್ಲಿ ಹಾಗೂ ತಮ್ಮ ಅಧೀನ ಕಾರ್ಯಾಲಯಗಳಲ್ಲಿಯೂ ಫೆ.15ಕ್ಕೆಶ್ರೀ ಸಂತ ಸೇವಾಲಾಲ್ ಜಯಂತಿಯನ್ನುಆಚರಿಸಬೇಕು ಮತ್ತು ಅಂದು ಬೆಳಿಗ್ಗೆ 10.30 ಗಂಟೆಗೆಜಿಲ್ಲಾಧಿಕಾರಿಗಳಕಚೇರಿ ಸಭಾಂಗಣದಲ್ಲಿಏರ್ಪಡಿಸಲಾದ ಜಿಲ್ಲಾ ಮಟ್ಟದ ಜಯಂತಿ ಪೂಜಾ ಕಾರ್ಯಕ್ರಮದಲ್ಲಿ ಎಲ್ಲಾ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯವಾಗಿ ಸರಿಯಾದ ಸಮಯಕ್ಕೆಭಾಗವಹಿಸಬೇಕು.

## ಫೆ.17ರಿಂದ 24ರವರೆಗೆ ವಾಹನ ಸಂಚಾರ ಗಣತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 12: ಲೋಕೋಪಂಯೋಗಿ ಇಲಾಖೆಯಿಂದಪ್ರತಿವರ್ಷಕ್ಕೊಮ್ಮೆ ಎರಡು ದಿನ ಮತ್ತು ಐದು ವರ್ಷಗಳಿಗೊಮ್ಮೆಏಳುದಿನಗಳ ರಾಜ್ಯ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ವಾಹನ ಸಂಚಾರ ಗಣತಿ ಕಾರ್ಯವನ್ನು ಫೆ.17ರಿಂದ 24ರವರೆಗೆಹಮ್ಮಿಕೊಳ್ಳಲಾಗಿದೆ.

ಈಗಣತಿಯಿಂದಸಂಗ್ರಹಿಸಿದ ಮಾಹಿತಿಯಿಂದ ಸರ್ಕಾರಕ್ಕೆ ರಸ್ತೆಗಳ ಸಂಚಾರ ಸಾಂದ್ರತೆ ಸಂಚಾರ ತೀವ್ರತೆ ಕಂಡು ಹಿಡಿಯುವುದಕ್ಕೆ ರಸ್ತೆಗಳ ಆಗಲಳತೆ ನಿರ್ಧರಿಸಲು ರಸ್ತೆಗಳನ್ನುಮೇಲ್ದರ್ಜೆಗೇರಿಸಲು ರಸ್ತೆಗಳ ಸ್ಥಿತಿಗತಿ ಸುಧಾರಿಸಲು ಅನುಕೂಲವಾಗುತ್ತದೆ. ರಸ್ತೆ ಸಂಚಾರಗಣತಿ ಕಾರ್ಯವನ್ನು ರಾಜ್ಯಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಸ್ಥಾಪಿಸಲಾಗುವ ಕೇಮರಾ ಬೇಸಡ್ ಗಣತಿ ಕೇಂದ್ರಗಳಲ್ಲಿ ಕೈಗೊಳ್ಳಲಾಗುತ್ತದೆ.

ಗಣತಿ ಕೇಂದ್ರಗಳಿದ್ದಲ್ಲಿ ವಾಹನ ರಸ್ತೆ ಸಂಚಾರ ಗಣತಿ ಕೇಂದ್ರವಿದೆ. ತಮ್ಮ ವಾಹನಗಳನ್ನುನಿಧಾನವಾಗಿ ಚಲಿಸಿ ಎಂದು ಸೂಚನಾ ಫಲಕಗಳನ್ನುತೂಗುಬಿಟ್ಟಿರುತ್ತಾರೆ. ಎಲ್ಲಾವಾಹನಚಾಲಕರುತಮ್ಮ ವಾಹನವನ್ನು ನಿಧಾನವಾಗಿ ಸಾಗಿಸಿಕೊಂಡು ಮುಂದೆ ಸಾಗಿಸಬೇಕು ಎಂದು ಲೋಕೋಪಯೋಗಿಇಲಾಖೆಯ ಬಳ್ಳಾರಿ ವೃತ್ತದ ಅಧೀಕ್ಷಕ ಇಂಜಿನೀಯರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**CITATION**

**IN THE COURT OF THE PRL. CIVIL JUDGE AND JMFC., AT HUMNABAD**

**Crl. Misc No. 42/2025**

**Petitione :-**

1). Shaikh Zafar S/o Shaikh Mahetab Sab Age; 60 years Occu: Business
2). Sabera Begum W/o Shaikh Zafar Age; 54 years Occu: House Hold
3). Shameem Begum W/o late Shaikh Hyder Age; Major Occu: House Hold
4). Shaikh Imaran S/o Shaikh Zafar Age; 28 years Occu: Business
5). Shaikh Salman S/o Shaik Zafar Age; 26 years Occu: Business
6). Shaikh Qadar S/o late Shaik Hyder Age; 35 Years Occu: Business
All R/o Shivpur Galli, Humnabad Tq;Humnabad.

//Vs//

**Respondent:-**

**The Registrar of Birth and Death through The Tahasildar Office Humnabad**

**Sub:- Petition U/Sec 13 (3) of Birth and Death Registration Act 1969**

Whereas the above named petitioners have filed the petition under section 13(3) of Birth and Death Registration Act 1969 praying this Honourable court to issue death certificate daughter-in-laws of petitioner no. 2 & 3 and sons of petitioner No. 1, 4, 5 and 6 namely : late MD. Mahetab Sab S/o Nabi Sab who died on 05-06-1977 at Shivpur Galli, Town Humnabad Tq:Humnabad Dist:Bidar. The petitioners claiming the death certificate of said Md. Mahetab Sab for transfer of property and other official purpose and home record.

Therefore, it is hereby proclaimed that if any persons have got any objection in this regard may approach to this court on 13-03-2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the 01-02-2025.

//By order of the court//
Chief Ministerial Officer
Prl. Civil Judge and JMFC Court,
Humnabad


## ಕಲ್ಯಾಣ ಕರ್ನಾಟಕದ ಬಹುದೊಡ್ಡ ಜಾತ್ರೆ ಜಗದ್ಗುರು ತಿಂಥಣಿಯ ಶ್ರೀ ಮೌನೇಶ್ವರ ಜಾತ್ರೆ.!



ಸುರಪುರ : ತಾಲೂಕಿನ ದಕ್ಷಿಣ ಕಾಶಿ ಎಂದೇ ಪ್ರಸಿದ್ಧ ಪಡಿದಿರುವ ಶ್ರೀ ಕ್ಷೇತ್ರ ಜಗದ್ಗುರು ಶ್ರೀ ಮೌನೇಶ್ವರಜಾತ್ರಾಮಹೋತ್ಸವ ಅದ್ದೂರಿಯಾಗಿ ನಡೆಯುತ್ತಿದೆ. ತಿಂಥಣಿ ಜಾತ್ರೆಯಲ್ಲಿ ಅದ್ದೂರಿ ಧಾರ್ಮಿಕ ಕಾರ್ಯಕ್ರಮ ವೈಭವ ನೋಡಲು ಬಲು ಚಂದ. ಸರ್ವ ಧರ್ಮಗಳ ಸಮನ್ವಯದಹರಿಕಾರ.ಹಿಂದೂ –ಮುಸ್ಲಿಂಭಾವೈಕ್ಯತೆಯಪ್ರತೀಕ ಮಹಾನ್ ಸಂತ ಜಗದ್ಗುರು ಶ್ರೀ ಮೌನೇಶ್ವರ ಜಾತ್ರಾ ಮಹೋತ್ಸವ ಈಗಾಗಲೇ ಪ್ರಾರಂಭವಾಗಿದೆ. ಕಳೆದ ಶನಿವಾರದಿಂದ ವಿವಿಧ ಧಾರ್ಮಿಕಕಾರ್ಯಕ್ರಮಗಳು ಭಕ್ತರಶ್ರದ್ಧಾ –ಭಕ್ತಿಯೊಂದಿಗೆ ದಿನ ಪ್ರತಿ ಅದ್ದೂರಿಯಾಗಿ ನಡೆಯುತ್ತಿದೆ.! ಸಾವಿರಾರು ಭಕ್ತರುದೇವಸ್ಥಾನಆವರಣದಲ್ಲಿ ಕುಳಿತು ಭಕ್ತಿಯೊಂದಿಗೆ ಮಹಾಪ್ರಸಾದ ಸ್ವೀಕರಿಸಿದರು ಸೋಮವಾರ ಪಲ್ಲಕ್ಕಿಯ ಪ್ರಥಮ ಸೇವೆ ನಡೆಯಿತು. ಸೋಮವಾರ ರಾತ್ರಿಪುರವಂತರ ಸೇವಾ ಆಕರ್ಷಕವಾಗಿ ಕಣ್ಣನ್ನು ಸೆಳೆಯಿತು.! ನಂತರ ಜೋಡು ಪಲ್ಲಕ್ಕಿ ದೇವಸ್ಥಾನದಲ್ಲಿ ಐದು ಸುತ್ತಲು ಪ್ರದಕ್ಷಣೆ ಮಾಡಲಾಯಿತು.ಮಂಗಳವಾರ ನಾನಾಧಾರ್ಮಿಕಕಾರ್ಯಕ್ರಮಗಳು ಏರ್ಪಡಿಸಲಾಗಿತ್ತು. ಶ್ರೀ ಮೌನೇಶ್ವರ ದೇವಸ್ಥಾನದಲ್ಲಿ ಜವಳ ಮತ್ತು ಉಪನಯನಾ ಗಳು ನಡೆದವು ಇಂದು ಬುಧವಾರ ಸಂಜೆ 5:00 ಗಂಟೆಗೆ ರಥೋತ್ಸವ ಪಲ್ಲಕ್ಕಿಯ ಮಹಾ ಸೇವೆ ಇರುತ್ತದೆ. ಗುರುವಾರ ಭಾರತ ಹುಣ್ಣಿಮೆ ದಿನ ಸಂಜೆ ಧೂಳುಗಾಯಿ ಗುಹಾ ಪ್ರವೇಶದೊಂದಿಗೆ ವಿಜೃಂಭಣೆಯಿಂದ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳಲಿದೆ.! ಭಾರತವೆಂದರೆಸರ್ವಧರ್ಮೀಯರ ತಾಣವಾಗಿದೆ. ಇಲ್ಲಿ ನೂರಾರು ಜಾತಿ ಮತ ಪಂಥಗಳ ಜನರು ಸೋಹದರ ಭಾವನೆ ಇಂದ ಜೀವಿಸುತ್ತಾರೆ. ತಿಂಥಣಿ ಶ್ರೀ ಮೌನೇಶ್ವರರು ಹಿಂದೂ–ಮುಸ್ಲಿಂ ಭಾವೈಕ್ಯತೆ ಸೂಚಕರಾಗಿದ್ದಾರೆ. ತಿಂಥಣಿ ದೇವಸ್ಥಾನದಲ್ಲಿ ನಿತ್ಯವೂ ಪ್ರತಿ ಧ್ವನಿಸುವ " ಓಂ ಏಕ್ ಲಾಕ್ ಪಂಶಿ ಹಜಾರ್ ಪಂಚೊ ಪೀರ್ ಪೈಗಂಬರ್ ಮೌನ ದಿನ್ ಕಾಶಿಪತಿ ಗಂಗಾಧರ್ ಹರ ಹರ ಮಹಾದೇವ್ " ಎಂಬ ಶ್ಲೋಕ ಹಿಂದೂ– ಮುಸ್ಲಿಂ ಧರ್ಮಗಳ ಸಮನ್ವತೆಯನ್ನು ಸಾರುತ್ತದೆ.!

## ಕಿತ್ತೂರ ರಾಣಿ ಚನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 12: ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಆದರ್ಶ ಸೇವೆ ಸಲ್ಲಿಸುತ್ತಿರುವ ಅರ್ಹ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ಕಿತ್ತೂರ ರಾಣಿ ಚನ್ನಮ್ಮ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರು ಅಗತ್ಯ ದಾಖಲಾತಿಗಳೊಂದಿಗೆ ಫೆ.18ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 05832–295646ಗೆ ಅಥವಾ ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪ ನಿರ್ದೇಶಕರ ಕಚೇರಿ, ಅಭಿವೃದ್ಧಿ ಅಧಿಕಾರಿಗಳು ಮಂತ್ರಾಲಯ ರೋಡ್ ಐ.ಡಿ.ಎಸ್.ಎಮ್.ಟಿಲೇಔಟ್ ಎದುರುಗಡೆ ರಾಯಚೂರು ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳಲ್ಲಿ ಕಲಿಕಾಸಕ್ತಿ ಬೆಳೆಸುವುದೇ ಕಲಿಕಾ ಹಬ್ಬದ ವೈಶಿಷ್ಟ್ಯತೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.12–ಸಾಮಾನ್ಯ ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳನ್ನುಗುರುತಿಸಿ ಅವರಲ್ಲಿ ಕಲಿಕಾಸಕ್ತಿಬೆಳೆಸಲು ಚಟುವಟಿಕೆ ಆಧಾರಿತವಾಗಿ ಕಲಿಸುವುದೇ ಕಲಿಕಾ ಹಬ್ಬ ಕಾರ್ಯಕ್ರಮದ ವಿಶೇಷತೆ ಎಂದು ಹುನಗುಂದ ಬಿಆರ್ ಸಿಯ ಸಂಪನ್ಮೂಲ ವ್ಯಕ್ತಿ ವಿನೋದಕುಮಾರ ಭೋವಿ ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನನಾಗೂರಗ್ರಾಮದಲ್ಲಿ ಬುಧವಾರನಡೆದಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸಿ ಚಾಲನೆ ನೀಡಿದ ಅವರು, ಪ್ರತಿಯೊಬ್ಬ ಮಗುವಿನಲ್ಲಿ ಕಲಿಕೆಯ ಮಾನದಂಡಗಳಾದ ಸ್ಪಷ್ಟ ಓದು, ಶುದ್ಧ ಬರಹ, ಸರಳ ಲೆಕ್ಕಾಚಾರದಸಾಮರ್ಥ್ಯವಿರಬೇಕು ಎಂದರು.

ಇಂತಹ ಸಾಮರ್ಥ್ಯವಿಲ್ಲದ ಮಕ್ಕಳನ್ನುಗುರುತಿಸಿ ಅವರಿಗೆ ಚಟುವಟಿಕೆಆಧಾರಿತಬೋಧನೆ ಮಾಡಿದರೆ ಅವರೂ ಸಹ ಎಲ್ಲ ಮಕ್ಕಳೊಂದಿಗೆ ಕಲಿಯುತ್ತಾರೆ ಎಂದು ಭೋವಿ ಹೇಳಿದರು.

ಬಿಐಇಆರ್‌ಟಿ ಸಂಗಮೇಶ ಹೊದ್ಲೂರ ಮಾತನಾಡಿ, ತಾವು ನಿಧಾನಗತಿಯ ಕಲಿಕೆಯ ಮಕ್ಕಳು ಎಂಬ ಕೀಳರಿಮೆ ಹೊಂದಿರುವ ಮಕ್ಕಳಲ್ಲಿಯೂ ತಮ್ಮಲ್ಲಿಯೂ ಸಾಮರ್ಥ್ಯವಿದೆ ಎನ್ನುವ ಛಲ ಮೂಡುವಂತಾಗಲು ಅವರಿಗೆ ವಿವಿಧ ರೀತಿಯ ಸ್ಪರ್ಧೆಗಳನ್ನು ಏರ್ಪಡಿಸಿ ಅವರು ಸ್ವಯಂ ಪ್ರೇರಿತವಾಗಿಭಾಗವಹಿಸುವಂತಹ ಅವಕಾಶವನ್ನುಮಕ್ಕಳ ಕಲಿಕಾ ಹಬ್ಬ ನೀಡುತ್ತದೆ ಎಂದರು.

ಗಟ್ಟಿ ಓದು, ಕೈಬರಹ, ಮೆಮೊರಿಪರೀಕ್ಷೆ,ರಸಪ್ರಶ್ನೆಯಂತಹ ಏಳು ಚಟುವಟಿಕೆಗಳಲ್ಲಿ ಮಕ್ಕಳು ಭಾಗವಹಿಸಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನವನ್ನು ಪಡೆದು–ಕೊಂಡರು. 20ಕ್ಕೂ ಹೆಚ್ಚು ಸಂಪನ್ಮೂಲ ಶಿಕ್ಷಕರು ಎಲ್ಲ ಸ್ಪರ್ಧೆಗಳನ್ನುನಡೆಸಿಕೊಟ್ಟರು.

ಬಹುಮಾನ ವಿತರಣೆ: ಹುನಗುಂದದ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಎಸ್.ಗುಡಗುಂಟಿ ಅವರ ನೇತೃತ್ವದಲ್ಲಿ ಬಹುಮಾನ ವಿತರಣೆ ಹಾಗೂ ಸಮಾರೋಪ ಸಮಾರಂಭ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ಹಂತದಲ್ಲಿ ಮಕ್ಕಳು ಅಮೋಘ ಸಾಧನೆ ಮಾಡಲು ಪ್ರಾಥಮಿಕ ಶಿಕ್ಷಣ ಅವರಿಗೆ ಭದ್ರಬುನಾದಿ ಆಗಬೇಕು. ಆನಿಟ್ಟಿನಲ್ಲಿ ಮಕ್ಕಳಲ್ಲಿ ಕಲಿಕಾ ಶಕ್ತಿಉಂಟುಮಾಡುವಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಪಾತ್ರದೊಡ್ಡದಾಗಿದೆ ಎಂದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಸಂಗಮೇಶ ಸಿಂಗಾಡಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಮಹಾಂತೇಶ ಮುರಡಿ, ಸದಸ್ಯ ಬಸ್ಲೆಟ್ಟೆಪ್ಪ ಸಿಂಗಾಡಿ, ಕಾರ್ಯದರ್ಶಿ ಆದನಗೌಡ ಹಿರೇಅಮರಗೌಡ್ರ, ಎಂ.ಬಿ. ಪರುತಗೌಡ್ರು, ಈರಪ್ಪಅಂಬಿಗೇರ, ಪರಶುರಾಮ ಹೂಲಗೇರಿ, ಬಸವರಾಜ ಮಾದರ, ಗುರಪ್ಪ ಹುಚನೂರ, ಅಯ್ಯನಗೌಡ ಗೌಡರ, ಶರಣಪ್ಪ ಗುರಿಕಾರ, ಸಿಆರ್‌ಪಿ ಸಂಗಪ್ಪ ಸಂಗಮ, ಬಿಆರ್‌ಪಿ ಜಿ.ವೈ.ಆಲೂರ , ಶಿಕ್ಷಕರಾದ ಸಿದ್ದು ಶೀಲವಂತರ, ಬಿ.ಜಿ.ಗೌಡರ, ಬಿ.ಎಚ್.ಭಜಂತ್ರಿ, ಅಶೋಕ ಬಳ್ಳಾ, ಎಸ್‌ಡಿಎಂಸಿ ಸದಸ್ಯರು ಶಿಕ್ಷಕ–ಶಿಕ್ಷಕಿಯರು ಉಪಸ್ಥಿತರಿದ್ದರು.

## ಜೀವನ ಮೌಲ್ಯಗಳನ್ನು ಕಲಿಸುವ ಶಿಕ್ಷಣ ಮುಖ್ಯ: ಡಾ.ಚಂದ್ರಶೇಖರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.12–ಇಂದು ಮಕ್ಕಳಿಗೆಜೀವನಮೌಲ್ಯಗಳನ್ನು ಕಲಿಸುವ ಶಿಕ್ಷಣದ ಅಗತ್ಯವಿದ್ದು, ಅವರಿಗೆ ಗುಣಮಟ್ಟದ ಶಿಕ್ಷಣ ನೀಡಿ ಸಮಾಜದ ಆದರ್ಶ ನಾಗರಿಕರಾಗಿ, ಸಾಧಕರಾಗುವಂತೆ ಪ್ರೋತ್ಸಾಹ, ಸ್ಫೂರ್ತಿ ತುಂಬಬೇಕಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಗೌರವಕಾರ್ಯದರ್ಶಿ ಡಾ.ಚಂದ್ರಶೇಖರ ಕಾಳನ್ನವರ ಹೇಳಿದರು.

ಜಿಲ್ಲೆಯ ಬಾದಾಮಿ ಪಟ್ಟಣದ ವಿಶ್ವಕರ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಬಾದಾಮಿಯ ವಿದ್ಯಾ ವಿಜಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ವಿಜಯ ಉತ್ಸವ 2025ರ ಪ್ರತಿಭಾ ಪುರಸ್ಕಾರ, ಅಗ್ನಿಶಾಮಕ, ಪೋಲಿಸ್ ಸಿಬ್ಬಂದಿಯವರಿಗೆ ಸತ್ಕಾರ ಸಮಾರಂಭದಲ್ಲಿ ಅತಿಥಿಗಳಾಗಿ ಅವರು ಮಾತನಾಡಿದರು.

ಮಕ್ಕಳು ಸ್ವಾಮಿ ವಿವೇಕಾನಂದ, ರವೀಂದ್ರನಾಥ ಟ್ಯಾಗೋರ, ಅಬ್ದುಲ್ ಕಲಾಂ, ವಿಶ್ವೇಶ್ವರಯ್ಯ, ಮದರ್ ತೇರೆಸಾ, ಸಾಲುಮರದ ತಿಮ್ಮಕ್ಕ ಅವರಂತಹ ಸಾಮಾಜಿಕ ಸಾಧಕರ ಬದುಕಿನ ಮೌಲ್ಯಗಳನ್ನು ಅಳವಡಿಸಿಕೊಂಡು ಸುಸಂಸ್ಕೃತ ಪ್ರಜೆಗಳಾಗಿ ಕಲಿತ ಶಾಲೆ, ಕಲಿಸಿದ ಶಿಕ್ಷಕರಿಗೆ ಕೀರ್ತಿ ತರುವ ಮಕ್ಕಳಾಗಿ ಬೆಳೆಯಬೇಕೆಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಮುರನಾಳ ಮಳೆರಾಜೇಂದ್ರ ಮಠದ ಪೂಜ್ಯಶ್ರೀ ಜಗನ್ನಾಥ ಮಹಾಪುರಷಸ್ವಾಮಿಜೀಯವರು ಆಶೀರ್ವಚನ ನೀಡಿ, ವಿಶ್ವಕರ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ವಿದ್ಯಾ ವಿಜಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಮಕ್ಕಳಿಗೆ ಸುಸಂಸ್ಕೃತವಾದ ಮೌಲ್ಯಯುತ ಜ್ಞಾನವನ್ನು ಕಲಿಸಿ, ಆದರ್ಶ ವ್ಯಕ್ತಿಗಳನ್ನಾಗಿ ರೂಪಿಸಿದೆ. ಮಕ್ಕಳ ಕಲಿಕೆಯ ಸಾಧನೆಗೆ ಪೋಷಕರು ಪ್ರೋತ್ಸಾಹ ಇರಬೇಕು. ಈ ಸಂಸ್ಥೆಯ ಅಧ್ಯಕ್ಷರ, ಶಿಕ್ಷಕರ ಪರಿಶ್ರಮವು ಸಾಮಾಜಿಕ ಪರಿಸರದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು.

ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಶ್ರೀಕಾಂತ ಬಡಿಗೇರ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಸಂಸ್ಥೆ ಪೋಷಕರು, ಪಾಲಕರ ಸಹಾಯ, ಸಹಕಾರದಿಂದ ಗುಣಮಟ್ಟದ ಶಿಕ್ಷಣವನ್ನು ನೀಡಲು ಸಾಧ್ಯವಾಗಿದೆ. ನಮ್ಮ ಶಾಲೆಯಲ್ಲಿ ತಂತ್ರಜ್ಞಾನ ಬಳಕೆ ಮಾಡಿಕೊಂಡು, ಡಿಜಿಟಲ್ ತರಗತಿಗಳ ಮೂಲಕ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಲಾಗುತ್ತಿದೆ ಎಂದು ಹೇಳಿದರು. ಪುರಸಭೆ ಸಭೆ ಸದಸ್ಯ ನಾಗರಾಜ ಕಾಚಟ್ಟಿ, ಮಂಜುನಾಥ ಹೊಸಮನಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ವಿದ್ಯಾರ್ಥಿಗಳು ಪರಿಶ್ರಮಪಟ್ಟು ಅಭ್ಯಾಸ ಮಾಡಿ, ಕಲಿತ ಸಂಸ್ಥೆಗೆ, ಹೆತ್ತ ತಂದೆ ತಾಯಿಯವರಿಗೆ ಕೀರ್ತಿ ತರುವ ಸಾಧಕರಾಗಬೇಕೆಂದು ಹೇಳಿದರು. ಸಂಸ್ಥೆಯ ಕಾರ್ಯದರ್ಶಿ ನಾರಾಯಣ ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಬಾದಾಮಿ ಅಗ್ನಿಶಾಮಕ ದಳ ಹಾಗೂ ಪೋಲಿಸ್ ಸಿಬ್ಬಂದಿಗಳಿಗೆ ಗೌರವ ಸನ್ಮಾನ ಮಾಡಲಾಯಿತು. ನಂತರ ಶಾಲಾ ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮಗಳು ಸಭಿಕರನ್ನು ರಂಜಿಸಿದವು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ಪೋಷಕರು, ಪಾಲಕರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಭಾಲ್ಕಿ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ನೇಮಕಾತಿ: ಅರ್ಜಿ ಆಹ್ವಾನ

ಬೀದರ: ಫೆ.12: ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ನೇಮಕಾತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹತೆ: ಜಿಲ್ಲಾ ಬಾರ್ ಅಸೋಸಿಯೇಷ???ನಲ್ಲಿ ನೋಂದಣಿ ವಿವರ, ಕರ್ನಾಟಕ ಬಾರ್ ಅಸೋಸಿಯೇಷನ್ ನೋಂದಣಿ ವಿವರ, ದಿವಾಣಿ ನ್ಯಾಯಾಲಯದಲ್ಲಿ ನಡೆಸಿದ ಪ್ರಕರಣಗಳ ಸಂಖ್ಯೆ, ಕ್ರಿಮಿನಲ್ ನ್ಯಾಯಾಲಯದಲ್ಲಿ ನಡೆಸಿದ ಪ್ರಕರಣಗಳ ಸಂಖ್ಯೆ, ಜಾತಿ ಮತ್ತು ಇತ್ಯಾದಿ ಪ್ರಮಾಣ ಪತ್ರ ದಾಖಲೆಗಳು, ವಕೀಲ ವೃತ್ತಿಯಲ್ಲಿ ಕನಿಷ್ಠ 10 ವರ್ಷಗಳ ಸೇವೆ ಸಲ್ಲಿಸಿದ ಅನುಭವ ಹೊಂದಿದ ಅಭ್ಯರ್ಥಿಗಳಿರಬೇಕು.

ಕಾರಣ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 5 ಮತ್ತು 26 (2) ಹಾಗೂ 12 (ಎ) (ಬಿ) ಮತ್ತು (ಸಿ) ನಿಯಮಗಳಿಗೆ ಒಳಪಟ್ಟು ಸದರಿ ಹುದ್ದೆಗೆ ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ದಿನಾಂಕ: 21–02–2025 ರಂದು ಸಂಜೆ 4 ಗಂಟೆಯೊಳಗಾಗಿ ಅರ್ಜಿಗಳನ್ನು (03 ಪ್ರತಿಗಳಲ್ಲಿ) ಜಿಲ್ಲಾಧಿಕಾರಿಗಳು ಬೀದರ ಅವರ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು ಹಾಗೂ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಕಛೇರಿ ಬೀದರ ಇವರ ಸಹಯೋಗದೊಂದಿಗೆ ಫೆಬ್ರುವರಿ.15 ರಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಆವರಣ ಮನ್ನಳ್ಳಿ ರಸ್ತೆ ಬೀದರದಲ್ಲಿ ಡಿಡಿಯು–ಜಿಕೆವೈ ಮತ್ತು ಸಂಕಲ್ಪ ಯೋಜನೆಯಡಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಬೀದರ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರು (ಡಿಆ???ಡಿಎ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸದರಿ ಮೇಳದಲ್ಲಿ ವಿವಿಧ ರೀತಿಯ ಪ್ರತಿಷ್ಠಿತ ಸಂಸ್ಥೆಗಳು ಮತ್ತು ಸ್ಥಳೀಯ ಉದ್ಯೋಗದಾತ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ. ಕಾರಣ ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ (ಪಿಜಿ), ಐಟಿಐ, ಡಿಪ್ಲೋಮಾ, ಬಿಇ ಮತ್ತು ಫಾರ್ಮಸಿ ವಿದ್ಯಾರ್ಹತೆ ಹೊಂದಿರುವ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಬೇಕೆಂದು ಅವರು ತಿಳಿಸಿದ್ದಾರೆ.

# ಅಂತರ್ಜಾಲ ಉಪಯೋಗದಿಂದಾಗುವ ಅನಾಹುತಗಳ ಬಗ್ಗೆ ಎಚ್ಚರ ವಹಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸಲಹೆ




ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.12: ಸುರಕ್ಷಿತ ಅಂತರ್ಜಾಲ ದಿನವು (ಖಚಿಜಿಜಡಿ ಖಟಣಜಡಿಟಜಣ ಆಚಿಥಿ) ಡಿಜಿಟಲ್ ತಂತ್ರಜ್ಞಾನದ ಸುರಕ್ಷಿತ ಮತ್ತು ಸಕಾರಾತ್ಮಕ ಬಳಕೆಯನ್ನು ಉತ್ತೇಜಿಸಲು ಮತ್ತು ಎಲ್ಲಾ ಬಳಕೆದಾರರಿಗೆ, ವಿಶೇಷವಾಗಿ ಯುವ ಪೀಳಿಗೆಗೆ ಆನ್‌ಲೈನ್ ಸುರಕ್ಷತೆಯ ಮಹತ್ವದ ಕುರಿತು ಜಾಗೃತಿ ಮೂಡಿಸಲು ಮೀಸಲಾಗಿರುವ ದಿನವಾಗಿದ್ದು, ಅಂರ್ತಜಾಲ ಉಪಯೋಗದಿಂದಾಗುವ ಅನಾಹುತಗಳು ಹಾಗೂ ಅದರಿಂದಾಗುವ ಅಪಾಯಗಳಿಂದ ನಮ್ಮನ್ನು ನಾವು ಹೇಗೆ ರಕ್ಷಿಸಿಕೊಳಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಸಲಹೆ ನೀಡಿದರು.

ಅವರು ಇಂದು ನಗರದ ಡಾ.ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಸುರಕ್ಷಿತ ಅಂರ್ತಜಾಲ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂಟರ್ನೆಟ್ ನಮ್ಮ ದೈನಂದಿನ ಜೀವನದ ಪ್ರಮುಖ ಭಾಗವಾಗಿದೆ. ನಾವು ದಿನಾಲು ನಿರಂತರವಾಗಿ ಈ ವಿಶಾಲವಾದ ಡಿಜಿಟಲ್ ವಿಶ್ವಕ್ಕೆ ಸಂಪರ್ಕ ಹೊಂದಿದ್ದೇವೆ. ಸಾಮಾಜಿಕ ಮಾಧ್ಯಮ ಪ್ಲಾಟಫಾರ್ಮಗಳಿಂದ ಆನ್‌ಲೈನ್ ಶಾಪಿಂಗ್, ಶಿಕ್ಷಣ ಮತ್ತು ಸಂವಹನದವರೆಗೆ ಇಂಟರ್ನೆಟ್ ಅವಕಾಶಗಳನ್ನು ನೀಡುತ್ತದೆ. ಆದರೆ ಈ ಅವಕಾಶಗಳೊಂದಿಗೆ ನಮ್ಮ ಗೌಪ್ಯತೆ, ಭದ್ರತೆ, ಮಾನಸಿಕ ಯೋಗಕ್ಷೇಮ ಮತ್ತು ನಮ್ಮ ವೈಯಕ್ತಿಕ ಸಂಬಂಧಗಳ ಮೇಲೆ ಪರಿಣಾಮ ಬೀರುವ ಕೆಲವು ಅಪಾಯಗಳು ಕೂಡ ಬರುತ್ತಿವೆ. ಈ ವರ್ಷದ ಸುರಕ್ಷಿತ ಇಂಟರ್ನೆಟ್ ದಿನದ ವಿಷಯವು "Together, for a better internet" ("ಜೊತೆ–ಯಾಗಿ ಉತ್ತಮ ಇಂಟರ್ನೆಟ್ ಕಡೆಗೆ") ಇದು ನಮ್ಮನ್ನು ಪ್ರೋತ್ಸಾಹಿಸುತ್ತದೆ, ಇಲ್ಲಿ ನಾವು ಎದುರಿಸಬೇಕಾದ ಅಪಾಯಗಳನ್ನು ಅರ್ಥಮಾಡಿಕೊಳ್ಳುವುದು ಮಾತ್ರವಲ್ಲದೆ ಆನ್‌ಲೈನ್ ಜಗತ್ತನ್ನು ಎಲ್ಲರಿಗೂ ಸುರಕ್ಷಿತ ಸ್ಥಳವನ್ನಾಗಿ ಮಾಡಲು ಸಕ್ರಿಯವಾಗಿ ಕೆಲಸ ಮಾಡಬೇಕಾಗಿದೆ ಎಂದು ಹೇಳಿದರು.

ಜಿಲ್ಲಾ ಸೂಚನಾ ಹಾಗೂ ವಿಜ್ಞಾನ ಅಧೀಕಾರಿಗಳಾದ ಕೆ. ಶ್ರೀನಿವಾಸ ಅವರು ಮಾತನಾಡಿ, ನಾವು ಇಂಟರ್ನೆಟ್ ಅನ್ನು ಬಳಸುವಾಗ ಏನನ್ನು ಹಂಚಿಕೊಳ್ಳಬೇಕು, ನಾವು ಹೇಗೆ ವರ್ತಿಸಬೇಕು ಮತ್ತು ನಮ್ಮನ್ನು ಮತ್ತು ಇತರರನ್ನು ನಾವು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದನ್ನು ಇಂದು ನಾವೆಲ್ಲರು ಅರಿತುಕೊಳ್ಳಬೇಕಾಗಿದೆ. ನಮ್ಮ ವೈಯಕ್ತಿಕ ಮಾಹಿತಿ ಅಂದರೆ ನಮ್ಮ ಹೆಸರು, ವಿಳಾಸ, ಬ್ಯಾಂಕ್ ವಿವರಗಳು, ಅಥವಾ ಇಮೇಲ್ ಇವು ಬಹುಮಟ್ಟಿಗೆ ನಮ್ಮ ಗೌಪ್ಯತೆಯ ಭಾಗವಾಗಿವೆ. ಆದ್ದರಿಂದ, ಇದನ್ನು ಹಂಚಿಕೊಳ್ಳುವಾಗ ಎಚ್ಚರಿಕೆ ಇರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಸಹಾಯಕ ಆಯುಕ್ತರಾದ ಮೊಹಮ್ಮದ ಶಕೀಲ್, ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ ಸೇರಿದಂತೆ ಇತರರು ಉಪಸ್ಥಿತರಿದದರು.

# 19ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ:ನ್ಯಾಯವಾದಿ ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.12: ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು 19 ಫೆಬ್ರುವರಿ 2025 ರಂದು ಬುಧವಾರ ಬೀದರನಲ್ಲಿ ಪ್ರತಿ ವರ್ಷದಂತೆ ಸಂಸದರು, ಶಾಸಕರು, ಮತ್ತು ಇತರ ಗಣ್ಯರ ಸಮ್ಮುಖದಲ್ಲಿ ಆಯೋಜಿಸಲಾಗುತ್ತಿದೆ ಎಂದು ಛತ್ರಪತಿ ಶಿವಾಜಿ ಮಹಾರಾಜ ಸ್ಮಾರಕ ಸಮಿತಿ ಅಧ್ಯಕ್ಷರು ಹಾಗೂ ಜಯಂತಿ ಆಚರಣೆ ಸಮಿತಿಯ ಅಧ್ಯಕ್ಷರು ಆಗಿರುವ ನ್ಯಾ. ಮದನರಾವ ಬಿರಾದಾರ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಶಿವಾಜಿ ಮಹಾರಾಜರು 18 ಪಗಡೆ ಜಾತಿ 12 ಬಲುತ್ತೇದಾರರು, ಅಲ್ಪಸಂಖ್ಯಾತರು ಹಾಗೂ ದೀನ ದಲಿತರ ಮೆಚ್ಚಿನ ರಾಜ ಇದ್ದರೂ, ಹಿಂದು ಸ್ವರಾಜ್ಯದ ಸ್ಥಾಪಕ ಮತ್ತು ಎಲ್ಲಾ ಭಾರತೀಯರ ಸ್ವಫತಿ ಅಂತಹ ಮಹಾನ ರಾಜನ ಜನ್ಮ ದಿನಾಚರಣೆಯಲ್ಲಿ ನಾವೆಲ್ಲರೂ ಪಾಲ್ಗೊಳ್ಳುವುದು ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ.

ಕಾರ್ಯಕ್ರಮದ ವಿವರಣೆ ನೀಡಿರುವ ಅವರು, ಜಿಲ್ಲಾಧಿಕಾರಿ ಕಚೇರಿಯಲ್ಲಿ ಬೆಳಗ್ಗೆ 10:00 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೇರಿದಂತೆ ಎಲ್ಲಾ ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು ಹಾಗೂ ಸಮಾಜ ಮುಖಂಡರ ಸಮ್ಮುಖದಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರದ ಪೂಜೆ ನೆರವೇರುವುದು, 10:15 ಶ್ರೀ ಛತ್ರಪತಿ ಶಿವಾಜಿ ಮಹಾರಾಜ ಚೌಕ್‌ನಲ್ಲಿ ಶಿವಾಜಿ ಮೂರ್ತಿಯ ಪೂಜೆಯ ನಂತರ ಭವ್ಯ ಮೆರವಣಿಗೆ ಜರುಗಲಿದೆ. ಗುತ್ತಿಗೆದಾರ ವಸಂತರಾವ ಬಿರಾದಾರ ಅವರು ಅಲಂಕರಿಸಿರುವ ವಾಹನದಲ್ಲಿ ಶಿವಾಜಿ ಮಹಾರಾಜರ ಭವ್ಯ ಮೆರವಣಿಗೆ ಜರುಗಲಿದೆ. ಮೆರವಣಿಗೆಯು ಶಿವಾಜಿ ಪ್ರತಿಮೆ, ಹರಳಯ್ಯಾ ವೃತ್ತ, ಸರ್ಕಾರಿ ಆಸ್ಪತ್ರೆ, ಅಂಬೇಡ್ಕರ ವೃತ್ತ, ಭಗತ ಸಿಂಗ್ ವೃತ್ತ, ಬಸವೇಶ್ವರ ವೃತ್ತ, ಛತ್ರಪತಿ ಶಿವಾಜಿ ಮಹಾರಾಜ ವೃತ್ತದಿಂದ ನೇರವಾಗಿ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರಕ್ಕೆ ಬಂದು ತಲುಪಲಿದೆ. ನಂತರ ಡಾ.ಚನ್ನಬಸವಪಟ್ಟದ್ದೇವರ ರಂಗ ಮಂದಿರದಲ್ಲಿ ಮಧ್ಯಾಹ್ನ 12:30 ಕ್ಕೆ ವೇದಿಕೆ ಕಾರ್ಯಕ್ರಮ ಜರುಗಲಿದೆ. ಧಾರಾಸಿಂವ ಜಿಲ್ಲೆಯ ಮಾಜಿ ಸಂಸದ ರವಿಂದ್ರ ವಿಶ್ವನಾಥರಾವ ಗಾಯಕವಾಡ ಮುಖ್ಯ ಭಾಷಣಕಾರರಾಗಿ ಪಾಲ್ಗೊಳ್ಳುವರು. ಮಾಜಿ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷ ಪ್ರಕಾಶ ಕಾಶಿನಾಥರಾವ ಪಾಟೀಲ್ ಘಾಟಬೋರೊಳ ಅಧ್ಯಕ್ಷತೆ ವಹಿಸುವರು.

ಅಂದು ಉಸ್ಮಾನ್ ಗಂಜ್ ನಲ್ಲಿರುವ ಸುವರ್ಣಕರ ಆಸೋಸಿಯೇಶನವತಿಯಿಂದ ಬೆಳಿಗ್ಗೆ ಉಪಹಾರ ಮತ್ತು ಮಧ್ಯಾಹ್ನ 2 ಗಂಟೆಗೆ ಹಬ್ಬದ ಊಟದ ವ್ಯವಸ್ಥೆ ಮಾಡಲಾಗಿದೆ. ಇದೇ ಸಂದರ್ಭದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜನ್ಮೋತ್ಸವ ಸಮಿತಿ ರಚಿಸಲಾಗಿದ್ದು ನ್ಯಾಯವಾದಿ ಮದನರಾವ ಬಿರಾದಾರ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಬಂಡೆಪ್ಪ ಖಾಶೆಂಪುರ, ರಘುನಾಥರಾವ ಜಾಧವ್, ವಿಜಯಕುಮಾರ ಪಾಟೀಲ ಕಣಜಿಕರ, ನ್ಯಾಯವಾದಿಗಳಾದ ನಾರಾಯಣ ಗಣೇಶ, ಕೃಷ್ಣ ಬಿರಾದಾರ, ಬಾಲಾಜಿ ಕೇಶವರಾವ ಕಣಜಿಕರ, ನಿವೃತ್ತ ಪ್ರಾಂಶುಪಾಲರಾದ ಗೋವಿಂದರಾವ ಬಿರಾದಾರ, ರಂಜಿತ್ ಪಾಟೀಲ, ವಿಠಲರಾವ ವಾಡೇಕರ್, ರಂಗರಾವ ಪಾಟೀಲ, ಉಸ್ಮಾನಗಂಜ್ ಅಕ್ಕಸಾಲಿಗರ ಸಂಘದ ಉಪಾಧ್ಯಕ್ಷ ಕಿರಣ ಚವ್ಹಾಣ, ಪ್ರಮುಖರಾದ ಅರ್ಜುನ ಬಿಲ್ಲಿ, ಪ್ರಕಾಶ ಜಾರೆ, ಶಿವಾಜಿರಾವ ಜ್ಞಾನೋಬರಾವ ಪಾಟೀಲ, ಕಾಶಿನಾಥರಾವ ಪಾಟೀಲ ಕಂದಗುಳ, ಸಾಯಿಕುಮಾರ ಕಣಜಕರ, ಗೋವಿಂದರಾವ ಗೊರ ಚಿಂಚೋಳಿ, ರಮೇಶ ಕಾರ ಜೋಳದಾಬಕಾ, ಗೋವಿಂದರಾವ ಬಿರಾದಾರ ನಿಲಮನಹಳ್ಳಿ, ಪಂಡಿತರಾವ ಜಾಧವ, ದೇವಿದಾಸ್ ಪಾಟೀಲ್ ಎನಗುಂದಾ, ರಾಜು ಪಾಟೀಲ ನೇಮತಾಬಾದ, ಸಂತೋಷ ಪಾಟೀಲ ಗೊರ್ನಾಳ, ಸಂಜೀವ ಪಾಟೀಲ ನೇಮತಾಬಾದ, ನೀಲೇಶ ಜಾಧವ ರಕ್ಷಾಳ, ರಮೇಶ ಶೇಕೋಬಾ, ವೆಂಕಟರಾವ ಚಿದ್ರಿ ಮರ್ಖಲ್, ರಾಜೇಂದ್ರ ಬಿರಾದಾರ, ಪ್ರಧಾನ ಕಾರ್ಯದರ್ಶಿ ಗುತ್ತಿಗೆದಾರ ವಿವೇಕಾನಂದ ಕನಸನಾಳೆ ನಾಮದಾಪೂರವಾಡಿ, ಸಂದೀಪ ಪಾಟೀಲ ಇವರು ಸಮಿತಿಯ ಸದಸ್ಯರಾಗಿರುತ್ತಾರೆ ಎಂದು ಮದರಾವ ಬಿರಾದಾರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಜೆಸ್ಕಾಂ: ಕುಂದು ಕೊರತೆ ನಿವಾರಣಾ ಸಭೆ ಫೆ.15ಕ್ಕೆ

ಬೀದರ: ಫೆ.12: ಜೇಸ್ಕಾಂ ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಹುಮನಾಬಾದ, ಮನ್ನಾಏಖೇಳ್ಳಿ ಹಾಗೂ ಬಸವಕಲ್ಯಾಣ, ಉಪ ವಿಭಾಗಗಳಲ್ಲಿ ಫೆಬ್ರುವರಿ.15 ರಂದು ಗ್ರಾಹಕರ ಕುಂದು ಕೊರತೆ ನಿವಾರಣಾ ಸಭೆಯನ್ನು ಕಾರ್ಯನಿರ್ವಾಹಕ ಇಂಜಿನಿಯರರು(ವಿ), ಗುವಿಸಕಂನಿ ಹುಮನಾಬಾದ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಗಳ ವಿವರ: ಫೆಬ್ರುವರಿ.15 ರಂದು ಬೆಳಿಗ್ಗೆ 11 ರಿಂದ 1 ಗಂಟೆಯವರೆಗೆ ಹುಮನಾಬಾದ ಉಪ ವಿಭಾಗದ ಹುಡಗಿ ಶಾಖೆ ಕಛೇರಿಯಲ್ಲಿ, ಮನ್ನಾಏಖೇಳ್ಳಿ ಉಪ ವಿಭಾಗದ ನಿರ್ಣಾ ಶಾಖೆ ಕಛೇರಿಯಲ್ಲಿ ಹಾಗೂ ಬಸವಕಲ್ಯಾಣ ಉಪ ವಿಭಾಗದ ಗ್ರಾಮೀಣ–2 ಶಾಖೆ ಕಛೇರಿಯಲ್ಲಿ ನಡೆಯಲಿವೆ.

ಕಾರಣ ಸಆರ್ವಜನಿಕರು ಹಾಗೂ ಗುವಿಸಕಂನಿ ಗ್ರಾಹಕರು ಈ ಸಭೆಯಲ್ಲಿ ಉಪಸ್ಥಿತರಿದ್ದು, ಕುಂದು ಕೊರತೆಯ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಫೆ.15 ರಂದು ಉದ್ಯೋಗ ಮೇಳ

ಬೀದರ: ಫೆ.12: ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಬೀದರ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು ಹಾಗೂ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಕಛೇರಿ ಬೀದರ ಇವರ ಸಹಯೋಗದೊಂದಿಗೆ ಫೆಬ್ರುವರಿ.15 ರಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಆವರಣ ಮನ್ನಳ್ಳಿ ರಸ್ತೆ ಬೀದರದಲ್ಲಿ ಡಿಡಿಯು–ಜಿಕೆವೈ ಮತ್ತು ಸಂಕಲ್ಪ ಯೋಜನೆಯಡಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಬೀದರ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರು (ಡಿಆ???ಡಿಎ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸದರಿ ಮೇಳದಲ್ಲಿ ವಿವಿಧ ರೀತಿಯ ಪ್ರತಿಷ್ಠಿತ ಸಂಸ್ಥೆಗಳು ಮತ್ತು ಸ್ಥಳೀಯ ಉದ್ಯೋಗದಾತ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ. ಕಾರಣ ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ (ಪಿಜಿ), ಐಟಿಐ, ಡಿಪ್ಲೋಮಾ, ಬಿಇ ಮತ್ತು ಫಾರ್ಮಸಿ ವಿದ್ಯಾರ್ಹತೆ ಹೊಂದಿರುವ ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಬೇಕೆಂದು ಅವರು ತಿಳಿಸಿದ್ದಾರೆ.

# ಬೀದರ್ ವಚನ ವಿಜಯೋತ್ಸವ: ಲಿಂಗಾಯತ ಧರ್ಮ ಗ್ರಂಥ, ವಚನ ಸಾಹಿತ್ಯದ ಮೆರವಣಿಗೆ



ಬೀದರ. ಫೆ. 12 : 23ನೇ ವಚನ ವಿಜಯೋತ್ಸವದ ಅಂಗವಾಗಿ ನಗರದಲ್ಲಿ ಬುಧವಾರ ಲಿಂಗಾಯತ ಧರ್ಮ ಗ್ರಂಥ ಗುರು ವಚನ ಮತ್ತು ವಚನ ಸಾಹಿತ್ಯದ ಭವ್ಯ ಮೆರವಣಿಗೆ ನಡೆಯಿತು.

ಹೂಗಳಿಂದ ಅಲಂಕೃತವಾದ ಬಸವ ರಥದಲ್ಲಿ ಬಸವೇಶ್ವರರ ಭಾವಚಿತ್ರ, ಧರ್ಮ ಗ್ರಂಥ ಇಟ್ಟು ಮೆರವಣಿಗೆ ಮಾಡಲಾಯಿತು. ವಿವೇಕ್–ಬಸವಣ್ಣ, ವನ್ನಕರ್ಣಿಕ ಖೂಬಾ–ಅಕ್ಕಮಹಾದೇವಿ, ಕವನ–ಅಲ್ಲಮಪ್ರಭು ವೇಷಧಾರಿಗಳಾಗಿ ಗಮನ ಸೆಳೆದರು.

ಡೊಳ್ಳು ಕುಣಿತ, ವಿವಿಧ ಕಲಾತಂಡಗಳು ಮೆರವಣಿಗೆಯ ಮೆರುಗು ಹೆಚ್ಚಿಸಿದವು.

ಶರಣ–ಶರಣೆಯರು ಬಿಳಿ ವಸ್ತ್ರ ಧರಿಸಿ, ಷಟಸ್ಥಲ ಚಿಹ್ನೆ ಇರುವ ಸ್ಕಾರ್ಫ್ ಧರಿಸಿಕೊಂಡು ತಲೆ ಮೇಲೆ ವಚನ ಸಾಹಿತ್ಯದ ಕಟ್ಟು ಹೊತ್ತು ಹೆಜ್ಜೆ ಹಾಕಿದರು. ಕೂಡಲಸಂಗಮ ಬಸವಧರ್ಮ ಪೀಠದ ಪೀಠಾಧ್ಯಕ್ಷೆ ಮಾತೆ ಗಂಗಾದೇವಿ, ಗಂಗಾಂಬಿಕಾ ಅಕ್ಕ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಜೊತೆಯಾದರು. ವಚನ ಗೀತೆಗಳಿಗೆ ಮೈಮರೆತು ಕುಣಿದರು. ನಗರದ ಬಸವೇಶ್ವರ ವೃತ್ತದಿಂದ ಆರಂಭಗೊಂಡ ಮೆರವಣಿಗೆಯು ಮಹಾವೀರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ಹರಳಯ್ಯಾ ವೃತ್ತ, ಮಡಿವಾಳ ಮಾಚಿದೇವ ವೃತ್ತ, ಕೇಂದ್ರ ಬಸ್ ನಿಲ್ದಾಣ, ಶಿವನಗರ, ಪಾಪನಾಶಿನಿ ಮೂಲಕ ಬಸವಗಿರಿ ತಲುಪಿತು. ಮಂಗಲಗಿ, ಗಡಿಕುಶನೂರ, ನಿರ್ಣಾ ವಾಡಿ, ಚಿಕ್ಕಪೇಟೆಯಿಂದ ಭಕ್ತರು ತಂದಿದ್ದ ಬಸವ ಜ್ಯೋತಿಯನ್ನು ಸ್ವಾಗತಿಸಲಾಯಿತು.

ಮೆರವಣಿಗೆಗೂ ಮುನ್ನ ಶಾಂತ–ಜೈರಾಜ ಖಂಡ್ರೆ ದಂಪತಿ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿದರು. ಉದ್ಯಮಿ ಗುರುನಾಥ ಕೊಳ್ಳೂರ ಅವರು ಷಟಸ್ಥಲ ಧ್ವಜಾರೋಹಣ ನೆರವೇರಿಸಿದರು. ಮೆರವಣಿಗೆ ಸಮಿತಿ ಅಧ್ಯಕ್ಷ ಜೈರಾಜ ಖಂಡ್ರೆ, ಕಾರ್ಯದರ್ಶಿ ರಾಜೇಂದ್ರಕುಮಾರ ಗಂದಗೆ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ವಚನ ಸಮೂಹ ಸಂಸ್ಥೆಯಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಹುಲಸೂರಿನ ಶಿವಾನಂದ ಸ್ವಾಮೀಜಿ, ನೆಲೋಗಿ ಸಿದ್ದಲಿಂಗ ಸ್ವಾಮೀಜಿ, ಬಸವಕಲ್ಯಾಣದ ಶಿವಾನಂದ ದೇವರು, ಭಾತಂಬ್ರಾ ಶಿವಯೋಗೀಶ್ವರ ಸ್ವಾಮೀಜಿ, ಹುಲಸೂರಿನ ಶಿವಾನಂದ ಸ್ವಾಮೀಜಿ, ಜಾಗತಿಕ ಲಿಂಗಾಯತ ಮಹಾಸಭಾ ಉಪಾಧ್ಯಕ್ಷ ಬಸವರಾಜ ಧನ್ನೂರ, ರಾಷ್ಟ್ರೀಯ ಬಸವ ದಳದ ಜಿಲ್ಲಾಧ್ಯಕ್ಷ ಸೋಮಶೇಖರ ಪಾಟೀಲ, ಪ್ರಧಾನ ಕಾರ್ಯದರ್ಶಿ ಸುರೇಶ ಸ್ವಾಮಿ, ಬಸವ ಕೇಂದ್ರದ ಅಧ್ಯಕ್ಷ ಶರಣಪ್ಪ ಮಿಠಾರೆ, ಮುಖಂಡರಾದ ದೀಪಕ್ ವಾಲಿ, ದೀಪಕ್ ವಾಲಿ, ಶಶಿ ಹೊಸಳ್ಳಿ, ವೈಜಿನಾಥ ಕಮಠಾಣೆ, ಬಸವರಾಜ ಪಾಟೀಲ ಅಷ್ಟೂರ, ಬಸವರಾಜ ಬುಳ್ಳಾ, ಆನಂದ ದೇವಪ್ಪ, ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಸಿಂಡಿ–ಕೇಟ್ ಸದಸ್ಯ ಬಸವರಾಜ ಭತಮುರ್ಗೆ, ಎಸ್ಪಿ ಪ್ರದೀಪ್ ಗುಂಟಿ, ಆನಂದ ದೇವಪ್ಪ ಮತ್ತಿತರರು ಪಾಲ್ಗೊಂಡಿದ್ದರು.

ಬಸವಾದಿ ಶರಣರ ತತ್ವಗಳೇ ಸಂವಿಧಾನದಲ್ಲಿ ಅಡಕ

'ಬಸವಾದಿ ಶರಣರ ತತ್ವಗಳೇ ಸಂವಿಧಾನದಲ್ಲಿ ಅಡಕವಾಗಿವೆ. ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಮೊದಲ ಸಂಸತ್ತು ಸ್ಥಾಪಿಸಿ, ಸಮ ಸಮಾಜದ ಬಗ್ಗೆ ಹೇಳಿದ್ದಾರೆ. ವಚನಗಳ ಮೂಲಕ ಶ್ರೇಷ್ಠ ತತ್ವಗಳನ್ನು ಸಮಾಜಕ್ಕೆ ಕೊಟ್ಟಿದ್ದಾರೆ. ಬಸವಾದಿ ಶರಣರ ತತ್ವಗಳೇ ಸಂವಿಧಾನದಲ್ಲಿ ಅಡಕವಾಗಿವೆ' ಎಂದು ವಚನ ಪಠಣ ಓದುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ ಮಾತನಾಡಿದರು.

ಬಸವತತ್ವ ಪ್ರಸಾರಕ್ಕೆ ವಚನ ವಿಜಯೋತ್ಸವ

'ಬಸವತತ್ವ ಪ್ರಚಾರ, ಪ್ರಸಾರಕ್ಕಾಗಿ ಪ್ರತಿ ವರ್ಷ ವಚನ ವಿಜಯೋತ್ಸವ ಆಯೋಜಿಸಲಾಗುತ್ತಿದೆ. 12ನೇ ಶತಮಾನದಲ್ಲಿ ನಡೆದ ಕಲ್ಯಾಣ ಕ್ರಾಂತಿಯ ಫಲವಾಗಿ ಸ್ವಾತಂತ್ರ್ಯ, ಸಮಾನತೆಗೆ ಅರ್ಥ ಬಂದಿದೆ. ಜಗ ಬದುಕಲಿ, ಜನ ಬದುಕಲೆಂದು ಬಸವಾದಿ ಶರಣರು ವಚನ ಸಾಹಿತ್ಯ ರಚಿಸಿ, ಪ್ರಾಣ ತ್ಯಾಗ ಮಾಡಿ ಅದನ್ನು ರಕ್ಷಿಸಿದ್ದರು. ಚನ್ನಬಸವಣ್ಣನವರ ಲಿಂಗೈಕ್ಯ ದಿನದಂದು ವಚನ ವಿಜಯೋತ್ಸವವಾಗಿ ಆಚರಿಸಲಾಗುತ್ತಿದೆ' ಎಂದು ಬಸವ ಸೇವಾ ಪ್ರತಿಷ್ಠಾನದ ಗಂಗಾಂಬಿಕಾ ಅಕ್ಕ ಹೇಳಿದರು.

# ರಕ್ತಹೀನತೆ ತಡೆಗೆ ಪೌಷ್ಟಿಕ ಆಹಾರ ಸೇವನೆ ಅಗತ್ಯ: ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.12:ರಕ್ತಹೀನತೆಗೆ ಪ್ರಮುಖ ಕಾರಣ ದೇಹದಲ್ಲಿನ ಕಬ್ಬಿಣಾಂಶ ಕೊರತೆ. ದೇಹಕ್ಕೆ ಅತ್ಯಗತ್ಯವಾದ ಕಬ್ಬಿಣಾಂಶ ನಾವು ದಿನನಿತ್ಯ ಸೇವಿಸುವ ಆಹಾರದಿಂದ ದೊರೆಯುತ್ತಿದ್ದು, ತಪ್ಪದೇ ಎಲ್ಲರೂ ಪೌಷ್ಟಿಕ ಆಹಾರ ಸೇವನೆ ಮಾಡಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಹೇಳಿದರು.

ಜಿಲ್ಲಾಡಳಿತ, ಭಾರತೀಯ ಮಕ್ಕಳ ತಜ್ಞ ವೈದ್ಯರ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಮಕ್ಕಳಲ್ಲಿನ ಅಪೌಷ್ಟಿಕತೆಯನ್ನು ಗುರುತಿಸಲು 5ನೇ ತರಗತಿಯಿಂದ 10ನೇ ತರಗತಿ ಒಳಗಿನ ಮಕ್ಕಳ ಆರೋಗ್ಯದ ತಪಾಸಣೆ ಮತ್ತು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಿಂಕ್ ವ್ಯಾನ್ ಜಾಥಾ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳಲ್ಲಿ ರಕ್ತಹೀನತೆ ಕಡಿಮೆ ಕಂಡುಬರುವುದರಿಂದ ಮಕ್ಕಳ ಬೆಳವಣಿಗೆ ಮತ್ತು ಅವರ ಭೌತಿಕ, ಶೈಕ್ಷಣಿಕ ಮತ್ತು ದೈಹಿಕ ಶಕ್ತಿ ಕಡಿಮೆಗೊಳ್ಳುತ್ತದೆ. ಹಾಗಾಗಿ ಮಕ್ಕಳು ಪೌಷ್ಟಿಕ ಆಹಾರ ಸೇವನೆಗೆ ಆದ್ಯತೆ ನೀಡಬೇಕು. ಅನೀಮಿಯ ಮುಕ್ತ ಬಳ್ಳಾರಿಯನ್ನಾಗಿಸಲು ಕೈಜೋಡಿಸಬೇಕು ಎಂದರು.

ಕರ್ನಾಟಕ ವೈದ್ಯಕೀಯ ಪರಿಷತ್ತಿನ ಅಧ್ಯಕ್ಷ ಡಾ.ಯೋಗಾನಂದ ರೆಡ್ಡಿ ಅವರು ಮಾತನಾಡಿ, ಅನೀಮಿಯ ಮುಕ್ತ ಭಾರತವನ್ನಾಗಿಸಲು ಹದಿಹರೆಯದವರಲ್ಲಿ ಆರೋಗ್ಯ



ತಪಾಸಣೆ ಕೈಗೊಂಡು ಸೂಕ್ತ ಆರೋಗ್ಯ ಪರಿಕ್ರಮ ಒದಗಿಸುವುದು ಪಿಂಕ್ ವ್ಯಾನ್‌ನ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಗ್ರಾಮೀಣ ಭಾಗದ ಮಕ್ಕಳಲ್ಲಿ ಶೇ.50 ರಿಂದ 60ರಷ್ಟು ಹಿಮೋಗ್ಲೋಬಿನ್‌ನ ಪ್ರಮಾಣವು 7 ರಿಂದ 8 ಮಿ.ಗ್ರಾಂ ಇರುವುದು ಕಂಡುಬರುತ್ತಿದ್ದು, ಇದು ಅಪಾಯಕಾರಿ ಸಂಗತಿಯಾಗಿದೆ. ಇದರಿಂದ ಮಕ್ಕಳ ಶಿಕ್ಷಣದ ಭೌತಿಕ ಮಟ್ಟ ಮತ್ತು ದೇಹದ ಶಕ್ತಿ ಕುಗ್ಗುವಿಕೆ ಕಾರಣವಾಗಲಿದೆ. ಹಾಗಾಗಿ ಮಕ್ಕಳಲ್ಲಿ ಹಿಮೋಗ್ಲೋಬಿನ್ ಪ್ರಮಾಣವು 11 ರಿಂದ 12 ಮಿ.ಗ್ರಾಂ ಹೆಚ್ಚಿರಬೇಕು. ಇದ-ರಿಂದ ಮಕ್ಕಳ ಆರೋಗ್ಯವು ವೃದ್ಧಿಯಾಗಲಿದೆ ಎಂದು ವಿವರಿಸಿದರು.ಬಳಿಕ ಜಾಥಾವು ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ಬಿಡಿಎಎ ಫುಟ್ಬಾಲ್ ಮೈದಾನದ ವೇದಿಕೆ ಸಭಾಂಗಣಕ್ಕೆ ತಲುಪಿತು.

ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ರಕ್ತಹೀನತೆಯು ಮಕ್ಕಳು, ಹದಿಹರೆಯದವರು ಮತ್ತು ಮಹಿಳೆಯರಲ್ಲಿ ಹೆಚ್ಚಾಗಿ ಕಂಡುಬರುತ್ತದೆ.ಗರ್ಭಿಣಿಯರು ಹಾಗೂ ಬಾಣಂತಿಯರಲ್ಲಿಯೂ ರಕ್ತಹೀನತೆ ಸಾಮಾನ್ಯವಾಗಿ ಕಂಡುಬರುತ್ತದೆ. ಪೌಷ್ಟಿಕ ಆಹಾರದ ಕೊರತೆಯಿಂದ ಹೆಣ್ಣು ಮಕ್ಕಳಲ್ಲಿ ಹೆಚ್ಚಾಗಿ ರಕ್ತಹೀನತೆ ಕಂಡುಬರುತ್ತದೆ ಎಂದರು.ರಕ್ತಹೀನತೆಯ ತೀವ್ರತೆಯನ್ನು ಅವಲಂಬಿಸಿ ರೋಗಿಗೆ ಚಿಕಿತ್ಸೆ ನೀಡಲಾಗುತ್ತದೆ. ಕಬ್ಬಿಣಾಂಶದ ಮಾತ್ರೆ ಅಥವಾ ಚುಚ್ಚುಮದ್ದಿನ ರೂಪದಲ್ಲಿ ಅತ್ಯಗತ್ಯ ಔಷಧಗಳನ್ನು ಜಿಲ್ಲಾ ಆಸ್ಪತ್ರೆಯಲ್ಲಿ ಪಡೆದುಕೊಳ್ಳಬೇಕು ಎಂದರು.ಅನೀಮಿಯ ಕುರಿತು ಗ್ರಾಮೀಣ ಭಾಗಗಳಲ್ಲಿ ಹೆಚ್ಚು ಹೆಚ್ಚು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಕಬ್ಬಿಣಾಂಶ ಹೆಚ್ಚಾಗಿರುವ ಆಹಾರ ಪದಾರ್ಥಗಳನ್ನು ಹೆಚ್ಚಾಗಿ ಸೇವಿಸುವುದರಿಂದ ರಕ್ತಹೀನತೆ ತಡೆಯಬಹುದು. ತರಕಾರಿ, ಸೊಪ್ಪು, ರಾಗಿ, ಮೊಳಕೆ ಕಟ್ಟಿದ ಕಾಳುಗಳು ಸೇರಿದಂತೆ ಮುಂತಾದವುಗಳ ಸೇವನೆಯಿಂದ ದೇಹಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಕಬ್ಬಿಣಾಂಶ ದೊರೆಯುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಗೆ ಆರೋಗ್ಯ ತಪಾಸಣೆ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಬಿಮ್ಸ್ ಪ್ರಭಾರಿ ನಿರ್ದೇಶಕ ಡಾ.ಕೃಷ್ಣ, ಐಎಪಿ ನಿಕಟ ಪೂರ್ವ ಅಧ್ಯಕ್ಷ ಡಾ.ಬಸವರಾಜ್.ಜಿ.ವಿ., ಬಿಮ್ಸ್ ಮಕ್ಕಳ ವಿಭಾಗದ ಮುಖ್ಯಸ್ಥ ಡಾ.ವಿಶ್ವನಾಥ, ಡಾ.ರವಿಶಂಕರ್, ಮಕ್ಕಳ ತಜ್ಞ ಡಾ.ದುರುಗಪ್ಪ, ಡಿಡಿಪಿಐ ವಿಷಯಾಧಿಕಾರಿ ಕೊಟ್ರೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಸೇರಿದಂತೆ ಶಾಲಾ ಶಿಕ್ಷಕರು, ಶಾಲಾ ಮಕ್ಕಳು ಹಾಗೂ ಇತರರು ಭಾಗವಹಿಸಿದ್ದರು.

# ಜೀತ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಪಣತೊಡಬೇಕಿದೆ: ನ್ಯಾಯಾಧೀಶೆ ಕೆ.ಜಿ.ಶಾಂತಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.12:ಸಮಾಜದಲ್ಲಿ ಜೀತ ಪದ್ಧತಿ, ಮಾನವ ಕಳ್ಳ ಸಾಗಾಣಿಕೆ ಶಿಕ್ಷಾರ್ಹ ಅಪರಾಧವಾಗಿದ್ದು, ಇವುಗಳನ್ನು ಬುಡ ಸಮೇತ ಕಿತ್ತೊಗೆಯಲು ಇಲಾಖೆಗಳೊಂದಿಗೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕಾರ್ಮಿಕ ಇಲಾಖೆ ವತಿಯಿಂದ ಜೀತ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಆರ್ಥಿಕ ಸ್ಥಿತಿ ಕಡಿಮೆಯಾದಾಗ ಜೀತಪದ್ಧತಿಯು ಉಲ್ಬಣಗೊಳ್ಳುತ್ತದೆ. ಪೂರ್ವಜರ ಕಾಲದಲ್ಲಿ ಜೀತ ಪದ್ಧತಿಯು ಆಳವಾಗಿ ಬೇರೂರಿತ್ತು. ಸ್ವಾತಂತ್ರ ??ದ ನಂತರ ಗಣನೀಯವಾಗಿ ಕಡಿಮೆಯಾಗಿದೆ ಎಂದರು.

14ವರ್ಷದೊಳಗಿನ ಮಕ್ಕಳನ್ನು ದುಡಿಮೆಗೆ ಬಳಸಿಕೊಳ್ಳುವುದು ಕಾನೂನು ಬಾಹಿರವಾಗಿದೆ. ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಶಿಕ್ಷಣದಿಂದ ಮಾತ್ರ ಜೀತ ಪದ್ಧತಿ ಸಂಪೂರ್ಣ ನಿರ್ಮೂಲನೆ ಮಾಡಲು ಸಾಧ್ಯ ಎಂದು ತಿಳಿಸಿದರು.

ಸಂವಿಧಾನವು ಪ್ರತಿಯೊಬ್ಬರಿಗೂ ಘನತೆಯಿಂದ ಬದುಕುವ ಹಕ್ಕು ನೀಡಿದೆ. ಸರ್ಕಾರವು ಶಿಕ್ಷಣ ಸೇರಿದಂತೆ ಹಲವಾರು ಸೌಲಭ್ಯಗಳನ್ನು ನೀಡುತ್ತಿದೆ. ಇವುಗಳ ಸದ್ಬಳಕೆಯಾಗಬೇಕು ಎಂದು ಹೇಳಿದರು.

ಜೀತಪದ್ಧತಿ ನಿರ್ಮೂಲನೆಗಾಗಿಯೇ ವಿವಿಧ ಇಲಾಖೆಗಳ ಜೊತೆ-ಗೂಡಿ ಟಾಸ್ಕ್ ಫೋರ್ಸ್ ರಚಿಸಲಾಗಿದೆ. ವಿದ್ಯಾರ್ಥಿಗಳು ಸಹ ಜೀತ ಪದ್ಧತಿಯ ನಿಷೇಧದ ಬಗ್ಗೆ ನಿಮ್ಮ ಸ್ನೇಹಿತರಿಗೂ ತಿಳಿಸಬೇಕು. ಮನೆಯ ಅಕ್ಕ-ಪಕ್ಕದ ನೆರೆಹೊರೆಯವರಿಗೂ ಮಾಹಿತಿ ಹಂಚಿಕೊಳ್ಳಬೇಕು. ಜೀತ ಪದ್ಧತಿ ಇರುವುದು ಕಂಡುಬಂದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, 14 ವರ್ಷದೊಳಗಿನ ಎಲ್ಲಾ ಮಕ್ಕಳು ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಬೇಕು. ಜಿಲ್ಲೆಯಲ್ಲಿ ಜೀತ ಪದ್ಧತಿ ಇಲ್ಲ. ಅನಿರ್ದಿಷ್ಟ ವಲಯ ಹಾಗೂ ಇತರೆ ಕೈಗಾರಿಕಾ ವಲಯಗಳಲ್ಲಿ ಜೀತ ಪದ್ಧತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರಾದ ಹೆಚ್.ಸಿ.ರಾಘವೇಂದ್ರ ಅವರು ಜೀತ ಕಾರ್ಮಿಕ ಪದ್ಧತಿ ವಿರೋಧಿ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಎ.ಮೌನೇಶ್, ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಶಾಲಾ ಮಕ್ಕಳು, ಮತ್ತಿತರರು ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ಇಲಾಖೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಬಳ್ಳಾರಿ,ಫೆ.12:ಪ್ರವಾಸೋದ್ಯಮ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಉದ್ಯಮಶೀಲತೆ ತರಬೇತಿ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನ ನೀಡಲು ಉದ್ದೇಶಿಸಿದ್ದು, ಈಗಾಗಲೇ ಅರ್ಜಿ ಸಹ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಫೆ.18 ರ ವರೆಗೆ ವಿಸ್ತರಿಸಲಾಗಿದೆ.

ಅರ್ಜಿಗಳನ್ನು ವಿಜಯನಗರ ಜಿಲ್ಲೆಯ ಕಮಲಾಪುರದ ಕಮಲ ಮಹಲ್ ಹತ್ತಿರದ ಪ್ರವಾಸೋದ್ಯಮ ಇಲಾಖೆಯ ಕಚೇರಿಯಲ್ಲಿ ಪಡೆದುಕೊಂಡು ಭರ್ತಿ ಮಾಡಿ ಇದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08394-295640 ಗೆ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.13 ರಂದು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮನುಡಿವಾರ್ತೆ ಬಳ್ಳಾರಿ,ಫೆ.12:ಬೆಂಗಳೂರಿನ ಅಂಗವಿಕಲ ವ್ಯಕ್ತಿಗಳ ಅಧಿನಿಯಮದ ರಾಜ್ಯ ಆಯುಕ್ತರು ಜಿಲ್ಲೆಯಲ್ಲಿ ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ 2016 ಅನುಷ್ಠಾನ, ವಿಕಲಚೇತನರಿಗೆ ಮೀಸಲಿರಿಸಿದ ಶೇ.5 ಅನುದಾನದ ಬಳಕೆ ಹಾಗೂ ವಿಕಲಚೇತನರ ಕಾರ್ಯಕ್ರಮಗಳ ಅನುಷ್ಠಾನದ ಕುರಿತು ಫೆ.13 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸುವರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಅವರು ತಿಳಿಸಿದ್ದಾರೆ

# ಜೆಇಇ ಮೇನ್ಸ್ ಪರೀಕ್ಷೆಯಲ್ಲಿ ಅಪ್ರತಿಮ ಸಾಧನೆಗೈದ ಗುರುಕುಲ ವಿದ್ಯಾರ್ಥಿಗಳು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.12: ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪಿಯು ಕಾಲೇಜು ಐಐಟಿಯನ್ಸ್ ಗಳನ್ನು ರೂಪಿಸುವ ಕೇಂದ್ರವಾಗಿ ತಯಾರಾಗಿದ್ದು, ಜೆಇಇ ಮೇನ್ಸ್ ಪರೀಕ್ಷೆಯ ಮೊದಲ ಹಂತದಲ್ಲಿ ವಿದ್ಯಾರ್ಥಿ ಅಭಿಷೇಕ ಶಂಕರ 99.76 ಪರ್ಸೆಂಟೈಲ್ ಪಡೆದು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾನೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದ್ದಾರೆ.

ಸಾಧಕ ವಿದ್ಯಾರ್ಥಿಗಳ ವಿವರ: ಸುಮಿತ್ ರಾಜೇಂದ್ರ 99.54, ಪರ್ಸೆಂಟೈಲ್, ಗಣೇಶ ಬಾಲಾಜಿ 99.41, ಅಭಿಷೇಕ ವಿಠಲರೆಡ್ಡಿ 99.25, ಗುಂಡಪ್ಪ ಮಾರುತಿ 99.23, ಅಸ್ಮಿತಾ ರಾಮ 99.13, ಸುಜಲ್ ದೀಪಕ 99.09, ಶಶಾಂಕ ಭೀಮಶಾ 98.78, ಅಕ್ಷಿತಾ ಯೋಗೇಶ 98.63, ಆನಂದ ಅಶೋಕ 98.59, ವಿ.ಕಾವ್ಯಾಂಜಲಿ 98.57, ಶಿವಕುಮಾರ ಜಗನ್ನಾಥ 98.56, ಪ್ರದ್ಯುಮ್ನಕುಮಾರ 98.48, ಕಾರ್ತಿಕ ಜಗದೀಶ 98.47, ಹರ್ಷ ಮಹಾದೇವ 98.31, ಮೇಘನಾ ಮೋಹನರೆಡ್ಡಿ 98.20, ತನೀಶಾ ರಾಮಕೃಷ್ಣ 98.10, ಚನ್ನಬಸವ ಮಹಾದೇವ 98.09, ಸಂಕಲ್ಪ ಸುಭಾಷ 98.09, ಶ್ರಾವಿ ರವಿ ಕಲಶೆಟ್ಟೆ 98.08, ವಿವೇಕರೆಡ್ಡಿ ಬಸವರಾಜ 98.05, ವೇದಾಂತ ಹಣಮಂತ 98, ಸೃಷ್ಟಿ ಸತ್ಯನಾರಾಯಣ 98, ಯಶ್ ಆನಂದ 98, ಶರಣ ನಾಗಣ್ಣಾ



97.54, ಸುಮಿತ್‌ರೆಡ್ಡಿ ಜಗನ್ನಾಥ 97.53, ಅತೀತ ರಘುನಾಥ 97.48, ಸತೀಶ ವೆಂಕಟ 97.44, ಆದಿತ್ಯ ಸುಭಾಷ 97.10, ಸೋಹಂ ಸಂತೋಷ 97.05, ಅವಿನಾಶ ಮೋಹನರೆಡ್ಡಿ 97, ಓಂಕಾರ ವಸಂತ 96.83, ವಿಷ್ಣು ಶರಣಪ್ಪಾ 96.55, ಅನಿರುದ್ಧ ರಾಜೇಶ 96.17, ವಿನಯಕುಮಾರ ಶಿವಕುಮಾರ 96.14, ಚನ್ನಬಸವ ಸೋಮನಾಥ 96.07, ಜ್ಞಾನೇಂದ್ರಕುಮಾರ ರಮೇಶ 96.01, ಶಶಿಕಾಂತ ವಿಶ್ವನಾಥ 96.14, ಸೃಷ್ಟಿ ರಾಘವೇಂದ್ರ 96, ಹರಿಪ್ರಸಾದ್ 95.86, ಅನುಷ್ಕಾ ನೀಲಕಂಠ 95.72, ನಿಂಗಯ್ಯಾ ಚಂದ್ರಶೇಖರಯ್ಯಾ 95.43, ಪೃಥ್ವಿರಾಜ್ ಮಜೋಜ್ 95.40, ಮಹ್ಮದ್ ತಲಹಾ 95, ಗಣೇಶ ಗೋವಿಂದರಾವ್ 95, ಕಾರ್ತಿಕ ಚಂದ್ರಕಾಂತ 95, ದಿಕ್ಷಾ ಸಂಗಪ್ಪ 95, ಪ್ರೇಮ ಮಾಣಿಕ 95, ಭೂಮಿಕಾ ಶಿವಕುಮಾರ 95, ವೈಷ್ಣವಿ ಸುರೇಶ 95, ಶ್ರೀಪಾದ ರಾಜೇಂದ್ರ 95, ಪರ್ಸೆಂಟೈಲ್ ಪಡೆದಿದ್ದಾರೆ.ಸುಮಾರು 300 ವಿದ್ಯಾರ್ಥಿಗಳು ಜೆಇಇ ಅಡ್ವಾನ್ಸ್ ಪರೀಕ್ಷೆ ಬರೆಯಲು ಅರ್ಹತೆ ಗಿಟ್ಟಿಸಿದ್ದಾರೆ.ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನರೆಡ್ಡಿ, ಪ್ರಾಚಾರ್ಯ ಬಸವರಾಜ ಮೊಳಕೀರೆ, ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ, ಶೈಕ್ಷಣಿಕ ನಿರ್ದೇಶಕ ಎಂ.ಶ್ರೀನಿವಾಸರೆಡ್ಡಿ, ರಾಘವೇಂದ್ರ ಪತ್ರಿ ಸಂತಸ ವ್ಯಕ್ತಪಡಿಸಿದ್ದಾರೆ.

# ಯುವನಿಧಿ ಅನುಷ್ಠಾನ: ಕೌಶಲ್ಯಾಭಿವೃದ್ಧಿ ಸಚಿವರ ಭೇಟಿ ಮಾಡಿದ ಎಸ್.ಆರ್.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಫೆ 12:ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್. ಪಾಟೀಲ ಅವರು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲೊಂದಾದ 'ಯುವನಿಧಿ' ಯೋಜನೆಯ ಪರಿಣಾಮಕಾರಿ ಅನುಷ್ಠಾನದ ಕುರಿತು ರಾಜ್ಯದ ಕೌಶಲ್ಯಾಭಿವೃದ್ಧಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ ಅವರನ್ನು ವಿಧಾನಸೌಧದ ಸಚಿವರ ಕಚೇರಿಯಲ್ಲಿ ಭೇಟಿ ಮಾಡಿ ಚರ್ಚಿಸಿದರು.

ವಿದ್ಯಾವಂತ ನಿರುದ್ಯೋಗಿ ಪದವೀಧರರು ಮತ್ತು ಡಿಪ್ಲಮೋ ಅಭ್ಯರ್ಥಿಗಳಿಗೆ ಯುವನಿಧಿಗೆ ಸುಲಭವಾಗಿ ನೊಂದಣಿ ಮಾಡಲು ಅನುವಾಗುವಂತೆ ಪ್ರಕ್ರಿಯೆ ಸರಳೀಕರಣಗೊಳಿಸುವುದು ಸೇರಿದಂತೆ ಯೋಜನೆಯ



ಸಾಧಕ ಬಾಧಕಗಳ ಕುರಿತು ಅವರು ಚರ್ಚಿಸಿದರು.

ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯಾದ್ಯಂತ ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ನೊಂದಣಿ ಅಭಿಯಾನವನ್ನು ಕೈಗೊಂಡಿರುವ ಕುರಿತು ಎಸ್.ಆರ್. ಪಾಟೀಲ ಅವರು ಸಚಿವರನ್ನು ಅಭಿನಂದಿಸಿದರು.

ಯೋಜನೆ ಅನುಷ್ಠಾನಕ್ಕೆ ಯಾವುದೇ ಆರ್ಥಿಕ ತೆ-ೊಂದರೆ ಇಲ್ಲ. ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಅಭ್ಯರ್ಥಿಗಳು ನೊಂದಣಿಯಾಗುಂತೆ ಪ್ರೇರೆಪಿಸಲು ತಾಲೂಕು ಹಾಗೂ ಜಿಲ್ಲಾ ಘಟಕಗಳ ಸದಸ್ಯರು ಶ್ರಮ ವಹಿಸುತ್ತಿದ್ದಾರೆಂದು ತಿಳಿಸಿದರು.

ರಾಣೆಬೆನ್ನೂರು ತಾಲೂಕಿನ ಮಹಿಳೆಯೊಬ್ಬರು ತಮ್ಮ ಒಂದು ವರ್ಷದ ಗೃಹಲಕ್ಷ್ಮಿ ಹಣ 24.000/- ರೂ.ಗಳನ್ನು ತಮ್ಮ ಗ್ರಾಮದ ಶಾಲೆಯ ಅಭಿವೃದ್ಧಿಗೆ ನೀಡಿ ಉದಾರತೆ ಮೆರೆದಿದ್ದನ್ನು ಸಚಿವರು ಶ್ಲಾಘಿಸಿದರು.

# ಮದಕಟ್ಟಿ ಗ್ರಾಪಂ ಅಧ್ಯಕ್ಷೆಯಾಗಿ ಪಾರ್ವತಿ ಲಿಂಗರಾಜ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.12: ತಾಲೂಕಿನ ಮದಕಟ್ಟಿಗ್ರಾಮಪಂಚಾಯಿತಿಯ ನೂತನಅಧ್ಯಕ್ಷೆಯಾಗಿ ಪಾರ್ವತಿ ಲಿಂಗರಾಜ ಖಂಡಾಳೆ ಆಯ್ಕೆಯಾಗಿದ್ದಾರೆ.

ಗ್ರಾಮದ ಗ್ರಾಮ ಪಂಚಾಯತಿ ಕಚೇರಿಯ ಸಭಾಂಗಣದಲ್ಲಿ ಬುಧವಾರ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಪಾರ್ವತಿ ಲಿಂಗರಾಜ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿ ಸೂರ್ಯಕಾಂತ ಬಿರಾದಾರ್ ಅವಿರೋಧ ಆಯ್ಕೆ ಪ್ರಕಟಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯರಾದ ಶಿವಕುಮಾರ ಹಜನಾಳ, ಸಂತೋಷ ಬಿರಾದಾರ್, ಆಶಿಶ ಬಿರಾದಾರ್, ನಾಗನ್ನಾಥ ಗುಂಡಪ್ಪ, ಸಚಿನ ಬಿರಾದಾರ್, ಸತೀಶ ಮಾನೆ, ಸಂಗೀತಾ ಮಧುರಾವ, ಮಹಾದೇವಿ ಚಂದ್ರಕಾಂತ, ಸುನಿತಾ ಗಣಪತಿ, ಕಸ್ತೂರಿಬಾಯಿ ಚನ್ನಬಸಪ್ಪ, ಪ್ರಮುಖರಾದ ಸಂಗಮೇಶ ಹುಣಜೆ ಮದಕಟ್ಟಿ, ಕಲ್ಲಪ್ಪ ಖಂಡಾಳೆ, ಚನ್ನಪ್ಪ ಅಳ್ಳೆ, ಶಿವು ಸ್ವಾಮಿ, ರಾಜಕುಮಾರ ಗೋಡಗಾವೆ, ಉಮೇಶ ನೇಳಗೆ, ಲಿಂಗರಾಜ ಖಂಡಾಳೆ, ಆಕಾಶ ಖಂಡಾಳೆ, ಪ್ರಶಾಂತ ಕೊಟಗೀರಾ ಇದ್ದರು.

# ವಿಶ್ವ ಬೆಳಗಿದ ಮಾನವತಾವಾದಿ ಡಾ.ಅಂಬೇಡ್ಕರ: ಪ್ರೊ. ಸಂಪತ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.12– ಡಾ.ಬಿ.ಆರ್.ಅಂಬೇಡ್ಕರ ವಿಶ್ವಕ್ಕೆ ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿ, ನಮ್ಮ ರಾಷ್ಟ್ರದ ಕೀರ್ತಿಯನ್ನು ಜಗತ್ತಿನ ಉದ್ದಗಲಕ್ಕೂ ಬೆಳಗಿಸಿದ ಮಹಾಮಾನವತಾವಾದಿ ಎಂದು ಉಪನ್ಯಾಸಕ ಸಂಪತ್ ಲಮಾಣಿ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಾಗಲಕೋಟೆ ಇದರ 2024–25 ರ ವಿಶೇಷ ಘಟಕದ ಯೋಜನೆಯಡಿ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ, ಸಾಂಸ್ಕೃತಿಕ ವಿಭಾಗದ ಸಹಯೋಗದಲ್ಲಿ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ ಓದು ಕಾರ್ಯಕ್ರಮದಲ್ಲಿ 'ಡಾ.ಬಿ.ಆರ್.ಅಂಬೇಡ್ಕರ ಜೀವನ ಮತ್ತು ಸಾಧನೆ' ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಇಂದು ಯುವ ಸಮುದಾಯ ಬುದ್ಧ, ಬಸವ, ಗಾಂಧಿ ಮತ್ತು ಅಂಬೇಡ್ಕರ ಅವರಂತಹ ಮಹಾನ್ ವ್ಯಕ್ತಿಗಳ ಜೀವನ ಚರಿತ್ರೆಯನ್ನು ಓದುವ ಮೂಲಕ ಅವರ ಬದುಕಿನ ಆದರ್ಶಗಳನ್ನು ತಿಳಿದುಕೊಂಡು ಸಮಾಜದಲ್ಲಿ ಸಾಧಕರಾಗಬೇಕು. ಶಿಕ್ಷಣ ಮತ್ತು ಜ್ಞಾನದಿಂದ ವ್ಯಕ್ತಿ ಹಾಗೂ ಸಮುದಾಯವನ್ನು ಆರ್ಥಿಕವಾಗಿ, ಸಾಮಾಜಿಕ ಸಮಾನತೆ ತರಲು ಸಾಧ್ಯವಿದೆ ಎಂದು ಸಂಪತ್ ಹೇಳಿದರು.

ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಡಾ.ಅಂಬೇಡ್ಕರ ಅವರ ಬಗ್ಗೆ ಓದುವದರಿಂದ ಅವರ ಜೀವನದ ಪರಿಶ್ರಮದ ಮೌಲ್ಯಗಳನ್ನು ತಿಳಿಯಲು ಸಾಧ್ಯವಾಗುತ್ತದೆ. ಬಡತನ, ಅವಮಾನಗಳನ್ನು ಅನುಭವಿಸಿ, ಶಿಕ್ಷಣ ಪಡೆದು ಆ ಜ್ಞಾನದ ಮೂಲಕ ಸಮಾಜದಲ್ಲಿ ಮಹಾನ್ ವ್ಯಕ್ತಿಗಳಾಗಿ, ಸಾಧಕರಾಗಿ ಸಮಾನತೆಯ ಸಮಾಜವನ್ನು ಅವರು ಬೆಳಗಿಸಿದ್ದಾರೆ ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರಣಕುಮಾರ ಜೈನಾಪುರ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ ಅವರ ಬದುಕು ಮತ್ತು ಸಾಧನೆಗಳ ಕುರಿತು ವಿದ್ಯಾರ್ಥಿಗಳಿಗೆ ಪರಿಚಯ ಮಾಡುವ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿದೆ. ಭಾರತ ಸಂವಿಧಾನ ಮತ್ತು ಡಾ. ಅಂಬೇಡ್ಕರ ಕುರಿತು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಮಾಡಲಾಗಿದೆ. ಆ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಪುಸ್ತಕ ರೂಪದ ಬಹುಮಾನ ಮತ್ತು ಪ್ರಶಸ್ತಿಗಳನ್ನು ಡಾ.ಅಂಬೇಡ್ಕರ ಓದು ಕಾರ್ಯಕ್ರಮದಲ್ಲಿ ನೀಡಲಾಗುತ್ತಿದೆ ಎಂದು ಹೇಳಿದರು.

ಕಾಲೇಜಿನ ಐಕ್ಯೂಎಸಿ ಸಂಚಾಲಕ ಡಾ.ಪಿ.ಐ.ಮಂಡಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಬಾಬಾಸಾಹೇಬ ಅಂಬೇಡ್ಕರರ ಆದರ್ಶಗಳು, ಅವರು ಬದುಕಿದ ರೀತಿ, ನೀತಿಗಳನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕೆಂದರು. ಸಂಚಾಲಕ ಡಾ.ಚಂದ್ರಶೇಖರ ಕಾಳನ್ನವರ, ಡಾ.ಸುಮಂಗಲಾ ಮೇಟಿ ಉಪಸ್ಥಿತರಿದ್ದರು.

ಚಂದ್ರಕಾಂತ ಆಲೂರ ಪ್ರಾರ್ಥಿಸಿದರು. ಡಾ.ಸುಮಂಗಲಾ ಮೇಟಿ ಸ್ವಾಗತಿಸಿದರು. ದೇವೇಂದ್ರ ನಾಯಕ ವಂದಿಸಿದರು.

# ಎಸ್ಡಿಎಂಸಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಫೆ.12: ಪಟ್ಟಣದ ಪ್ರಿಯಾದರ್ಶನಿ ಓಣಿಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ನೂತನ ಎಸ್ಡಿಎಂಸಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆಯನ್ನು ಮಂಗಳವಾರ ಚುನಾವಣಾಧಿಕಾರಿ ಹುಸಾಮುದ್ದೀನ್ ಬಾಬಾ ಅವರ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತ್ತು. ಅಧ್ಯಕ್ಷರಾಗಿ ಸಮೀನಾ ಬೇಗಂ, ಉಪಾಧ್ಯಕ್ಷರಾಗಿ ಪರ್ವೀನ್ ಬೇಗಂ ಆಯ್ಕೆಯಾದರು. ಈ ಸಂದರ್ಭದಲ್ಲಿ ಶಾಲೆ ಮುಖ್ಯ ಶಿಕ್ಷಕಿ ಕಸ್ತೂರಿಬಾಯಿ, ಸಹ ಶಿಕ್ಷಕಿ ತಸಲೀಮ್ ಬೇಗಂ, ಶಾಮರಾವ ಭುತ್ತಾಳೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೆ. ಗ್ಲೋಬಲ್ ಆರ್ ಗ್ಯಾನಿಕೆಮ್ ಪ್ರೈ, ಲಿಮಿಟೆಡ್ ಘಟಕ ಸ್ಥಾಪನೆಗೆ ಪರ ವಿರೋಧ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಫೆ.12: ತಾಲೂಕಿನ ಮುತ್ತಂಗಿ ಗ್ರಾಮದ ಹೊರವಲಯದಲ್ಲಿ ಮೆ: ಗ್ಲೋಬಲ್ ಆರ್ ಗ್ಯಾನಿಕೆಮ್ ಪ್ರೈ, ಲಿಮಿಟೆಡ್. ಹೊಸದಾಗಿ ಸಕ್ರಿಯ ಔಷಧೀಯ ಪದಾರ್ಥಗಳು (ಂಕಿಖ) ಮತ್ತು ಸಕ್ರಿಯ ಔಷಧೀಯ ಪದಾರ್ಥಗಳು ಮಧ್ಯಂತರಗಳನ್ನು (ಂಕಿಖ ಖಟಣಜಡಿಟಜಜುಚಿಣಜ) ತಯಾರಿಸುವ ಘಟಕ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ ಘಟಕವನ್ನು ಸ್ಥಾಪಿಸುವ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ ಬೀದರ್ ಇದರ ವತಿಯಿಂದ ಪರಿಸರ ಸಾರ್ವಜನಿಕರ ಆಲಿಕೆ ಸಭೆಯನ್ನು ಬುಧವಾರ ಅಪಾರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಸಭೆ ನಡೆಸಲಾಯಿತು. ಘಟಕ ಸ್ಥಾಪನೆ ಕುರಿತು ಸಾರ್ವಜನಿಕರಿಗೆ ಸಭೆಯ ಮುಖಾಂತರ ತಿಳಿಸಲಾಯಿತ್ತು. ಘಟಕ ಸ್ಥಾಪನೆಯಿಂದ ಪರಿಸರ ಹಾನಿ ಆಗುತ್ತದೆ ಹಾಗೂ ಈ ಭಾಗದ ರೈತರ ಬೆಳೆಗಳು ನಾಶವಾಗುವ ಭೀತಿಯಿದೆ ಎಂದು ಸಭೆಯಲ್ಲಿರುವ ಸಾರ್ವಜನಿಕರು ಅಪಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಇನ್ನು ಕೆಲವರು ಘಟಕ ಸ್ಥಾಪನೆ ಮಾಡುವುದರಿಂದ ಬಡವರ ಕೈಗೆ ಕೆಲಸ ಸಿಗುವುದರಿಂದ ಕಾರ್ಮಿಕರಿಗೆ ಇದರಿಂದ ಅನುಕೂಲವಾಗಲಿದೆ ಎಂದು ಸಭೆಯಲ್ಲಿರುವ ಕೆಲವು ಜನರು ತಿಳಿಸಿದ್ದಾರೆ. ಘಟಕ ಸ್ಥಾಪನೆ ಕುರಿತು ಪರ ಹಾಗೂ ವಿರೋಧ ಇ ಎಲ್ಲಾ ಸಂಗತಿಗಳನ್ನು ಸರ್ಕಾರಕ್ಕೆ ವರದಿ ಸಲ್ಲಿಸಿ ಸರ್ಕಾರದ ನಿರ್ಧಾರ ಅಂತಿಮವಾಗಲಿದೆ ಎಂದು ಸಭೆಯಲ್ಲಿರುವ ಸಾರ್ವಜನಿಕರಿಗೆ ಅಪಾರ ಜಿಲ್ಲಾಧಿಕಾರಿ ತಿಳಿಸಿದರು. ಈ ಸಂದರ್ಭದಲ್ಲಿ ಹಿರಿಯ ಪರಿಸರ ಅಧಿಕಾರಿ ಆರ್. ರೇಖಾ, ಪರಿಸರ ಅಧಿಕಾರಿ ಮೃತ್ಯುಂಜಯ, ತಹಶೀಲ್ದಾರ್ ಮಂಜುನಾಥ್ ಪಂಚಾಳ, ಪಂಚಾಯತ ಅಭಿವೃದ್ಧಿ ಅಧಿಕಾರಿ ಸವಿತಾಬಾಯಿ ಎಲ್. ಭಯ್ಯಾ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಇಂದು ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟನೆ

ಕಲಬುರಗಿ,ಫೆ.12:ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ (ನೋಡಲ್ ಅಧೀನದಲ್ಲಿ ಬರುವ) ಕಲಬುರಗಿ ಜಿಲ್ಲೆಯ ಸರ್ಕಾರಿ ಹಾಗೂ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಿದಾರರ 2024–25ನೇ ಸಾಲಿನ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಇದೇ ಫೆಬ್ರವರಿ 13 ರಿಂದ 15 ರವರೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಫೆಬ್ರವರಿ 13 ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಜಿಲ್ಲಾಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸುವರು. ಕಲಬುರಗಿ ಕೈಗಾರಿಕಾ ತರಬೇತಿ ಉದ್ಯೋಗ ಇಲಾಖೆಯ ವಿಭಾಗೀಯ ಕಚೇರಿಯ ಜಂಟಿ ನಿರ್ದೇಶಕ ರಾಜೇಶ ಭಾವಗಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ (ಪು) ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಮುರಳೀಧರ್ ರತ್ನಗಿರಿ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಅಮೃತ ಎಸ್. ಅಷ್ಟಗಿ, ಕಲಬುರಗಿ (ಪು) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಆಡಳಿತಾಧಿಕಾರಿ ಸುರೇಶ ವಗ್ಗೆ ಹಾಗೂ ಕೈಗಾರಿಕಾ ತರಬೇತಿ ಸಂಸ್ಥೆಯ ವಿ.ಇ.ಎಸ್. ಪ್ರಾಚಾರ್ಯ ಶಕೀಲ್ ಅನ್ಸಾರಿ ಅತಿಥಿಗಳಾಗಿ ಪಾಲ್ಗೊಳ್ಳುವರು.

# ಫೆ. 20 ರಂದು ಸೇಡಂ ಪುರಸಭೆಯ

## ಮುಂಗಡ ಪತ್ರ ತಯಾರಿ ಪೂರ್ವಭಾವಿ ಸಭೆ

ಕಲಬುರಗಿ,ಫೆ.12:ಸೇಡಂ ಪುರಸಭೆಯ 2025–26ನೇ ಸಾಲಿನ ಮುಂಗಡ ಪತ್ರ ತಯಾರಿಸಲು ಪೂರ್ವಭಾವಿ ಸಭೆಯನ್ನು ಇದೇ ಫೆಬ್ರವರಿ 20 ರಂದು ಬೆಳಿಗ್ಗೆ 11 ಗಂಟೆಗೆ ಸೇಡಂ ಪುರಸಭೆಯ ಸಭಾಂಗಣದಲ್ಲಿ ಜರುಗಲಿದೆ. ಈ ಸಭೆಯು ಪುರಸಭೆಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಜರುಗಲಿದ್ದು, ಸೇಡಂ ಪುರಸಭೆ ಸದಸ್ಯರು, ಜನಪ್ರತಿನಿಧಿಗಳು, ಪಟ್ಟಣದ ನಾಗರಿಕರು, ಸಂಘ ಸಂಸ್ಥೆಗಳ ಸದಸ್ಯರು ಹಾಗೂ ಉದ್ದಿಮೆದಾರರು ಈ ಸಭೆಯಲ್ಲಿ ಭಾಗವಹಿಸಿ ತಮ್ಮ ಸಲಹೆ ಸೂಚನೆ ನೀಡಬೇಕೆಂದು ಸೇಡಂ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

# ಫೆ. 15 ರಂದು ವಿಕಲಚೇತನರ ಉದ್ಯೋಗ ಮೇಳ

ಕಲಬುರಗಿ,ಫೆ.12:ಕಲಬುರಗಿ ಜಿಲ್ಲಾಡಳಿತ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಖರಣ ಇಲಾಖೆ ಇವುಗಳ ಸಹಯೋಗದೊಂದಿಗೆ ಯುಥ್ 4ಜಾಬ್ಸ್ (ಙಠಣಣ 4ರಿಠಭ) ವತಿಯಿಂದ ಇದೇ ಫೆಬ್ರವರಿ 15ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿಯಲ್ಲಿ ವಿಕಲಚೇತನರ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಈ ಮೇಲ್ಕಂಡ ದಿನದಂದು ನಡೆಯುವ ಉದ್ಯೋಗ ಮೇಳದಲ್ಲಿ ಕಲಬುರಗಿ ಜಿಲ್ಲೆಯ ವಿಕಲಚೇತನರು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಿದ್ದರಾಮ ಮೊಬೈಲ್ ಸಂಖ್ಯೆ 9591487839 ಹಾಗೂ ಮಹ್ಮದ ಸೈಫುಲ್ಲಾ ಮೊಬೈಲ್ ಸಂಖ್ಯೆ 8088457545 ಅಥವಾ aif@youth4jobs.org ವೆಬ್‌ಸೈಟ್‌ಗೆ ಸಂಪರ್ಕಿಸಲು ಕೋರಲಾಗಿದೆ.

# ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಸಿಸಿ ಟಿವಿ ಅಳವಡಿಕೆ



ಲಿಂಗಸುಗೂರು:ಫೆ.12:ನಗರದ 17 ವಾರ್ಡಿನಲ್ಲಿ ಇರುವ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಅಯ್ಯಪ್ಪ ಮಾಲೆಧಾರಿಗಳು ಹಾಗೂ ಭಕ್ತರ ಅನುಕೂಲಕ್ಕಾಗಿ ಸಿಸಿ ಕ್ಯಾಮೆರಾ ಹಾಗೂ ಸಿ.ಸಿ.ಟಿವಿ ಗಳು ಅಳವಡಿಕೆಗೆ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಚಾಲನೆ ನೀಡಲಾಯಿತು. ಅಯ್ಯಪ್ಪ ಸ್ವಾಮಿ ದೇವಸ್ಥಾನ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರು ಮನೋಹರ ರೆಡ್ಡಿ ಮೂನ್ನುರು ಚಾಲನೆ ನೀಡಿ ಮಾತನಾಡಿದ ದೇವಸ್ಥಾನಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಹೋಗುವುದರಿಂದ ಮತ್ತು ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ನವಂಬರ್ ಕಾರ್ತಿಕ ಮಾಸದಿಂದ ಪ್ರಾರಂಭವಾಗಿ ಮಕರ ಸಂಕ್ರಾಂತಿವರೆಗೆ ಅಯ್ಯಪ್ಪ ಮಾಲಾದಾರಿಗಳು ದೇವಸ್ಥಾನದಲ್ಲಿ ಇರುವುದರಿಂದ ಜನಜಂಗುಳಿ ನಿರ್ಮಾಣವಾಗುತ್ತಿದೆ. ಆದಕಾರಣ ಸಿಸಿ ಕ್ಯಾಮರಗಳನ್ನು ಅಳವಡಿಸಲಾಗಿದೆ. ಮತ್ತು ಇತ್ತೀಚಿಗೆ ರಾಜ್ಯದಲ್ಲಿ ಹಲವಾರು ಕಡೆ ದೇವಸ್ಥಾನಗಳು ಕಳ್ಳತನ ನಡೆಯುತ್ತಿದ್ದು ಮುಂಜಾಗ್ರತ ಕ್ರಮವಾಗಿ ಅಯ್ಯಪ್ಪ ಮಾಲದಾರಿಗಳು ಹಾಗೂ ಭಕ್ತರ ಅನುಕೂಲಕ್ಕಾಗಿ ಅಯ್ಯಪ್ಪ ಸ್ವಾಮಿ ದೇವಸ್ಥಾನ ಆವರಣ ಸುತ್ತ ಮುತ್ತ ಸಿ ಸಿ ಕ್ಯಾಮೆರಾ ಹಾಗೂ ಸಿಸಿಟಿವಿ ಅಳವಡಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಅಯ್ಯಪ್ಪ ಸ್ವಾಮಿ ದೇವಸ್ಥಾನ ಕಾರ್ಯದರ್ಶಿಗಳು ಈರಣ್ಣ ಗುರುಸ್ವಾಮಿ, ಖಜಾಂಚಿ ಬಾಲನ್, ಲಕ್ಷ್ಮಿದೇವಿ ದೇವಸ್ಥಾನದ ಅರ್ಚಕರು ಚಂದ್ರಕಾಂತ ಶಾಸ್ತ್ರಿ ಆಚಾರರು, ರಾಜೇಶ ಮಾಣಿಕ್, ವಾಸು, ಆದಪ್ಪ ಬಡಿಗೇರ, ಮಂಜುನಾಥ ಕುಪ್ಪಿಗುಡ್ಡ, ವಿಶ್ವನಾಥ ಸ್ವಾಮಿ ಹಿರೇಮಠ ( ಧೋನಿ ), ಗುರುನಾಥ ಸ್ವಾಮಿ ಹಿರೇಮಠ, ಶಿವುಕುಮಾರ ಹಿರೇಮಠ ಸೇರಿದಂತೆ ಅನೇಕರು ಇದ್ದರು.

# ಎಚ್ಚರಿಕೆಯಿಂದ

## ಇಂಟರ್ನೆಟ್ ಬಳಕೆ ಮಾಡಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು. ಫೆ 12: ಜಗತ್ತು ಇಂಟರ್ನೆಟ್ ಎಂಬ ಜಾಲದಲ್ಲಿ ಮುಳುಗಿದ್ದು, ಪ್ರಸ್ತುತ ವಿವಿಧ ರೀತಿಯಲ್ಲಿ ವಂಚಿಸುವ ಈ ಜಾಲತಾಣವು ಸಮಾಜವನ್ನು ಕಾಡುತ್ತಿದೆ. ಆದ್ದರಿಂದ ಇಂಟರ್ನೆಟ್ ಬಳಕೆದಾರರು ಎಚ್ಚರಿಕೆಯಿಂದ ಇರಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ಫೆ.11ರ ಮಂಗಳವಾರದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಂಗಣದಲ್ಲಿ ವಿಶ್ವಸುರಕ್ಷಿತ ಅಂತರ್ಜಾಲ ದಿನ ಆಚರಣೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮೊಬೈಲ್‌ನಲ್ಲಿ ಹಲವು ಆನ್‌ಲೈನ್ ವ್ಯವಹಾರವನ್ನು ಮಾಡುತ್ತಿದ್ದೇವೆ. ಇದನ್ನೇ ಬಂಡವಾಳವನ್ನಾಗಿಸಿಕೊಂಡು ಹಲವು ವಂಚಕರು ದುರುಪಯೋಗಪಡಿಸಿಕೊಳ್ಳುವ ಕಾರ್ಯ ಮಾಡುತ್ತಿದ್ದಾರೆ. ಹಾಗಾಗಿ ಒಟಿಪಿ ಇನ್ನಿತರ ಕೋಡ್‌ಗಳನ್ನು ಅನ್ಯರಿಗೆ ನೀಡದೆ ಅವಶ್ಯಕತೆಗೆ ತಕ್ಕಂತೆ ಬಳಸಿಕೊಳ್ಳಬೇಕಾಗಿದೆ ಎಂದರು.

ಹಿಂದೆ ವಂಚನೆಗಳು ದ–ರೋಡೆ, ಕಳ್ಳತನ ಇಂತಹ ವಂಚನೆಗಳಾಗುತ್ತಿತ್ತು. ಆದರೆ ಈಗ ಆನ್ ಲೈನ್ ಮೂಲಕ ಉದ್ಯೋಗಾವಕಾಶ, ಹಣಕಾಸು, ವೈಯಕ್ತಿಕ ಮಾಹಿತಿ, ದಾರಿತಪ್ಪಿಸುವ, ಸುಳ್ಳು, ಟ್ರೋಲ್, ಬೆದರಿಕೆ, ಕಿರುಕುಳ, ಅನಿಯಂತ್ರಿತ ವೆಚ್ಚಗಳು, ಸ್ಕ್ಯಾಮ್ ಹೀಗೆ ಹಲವು ರೀತಿಯ ಅಪರಾಧಗಳು ನಡೆಯುತ್ತಿದೆ. ಹಾಗೂ ಯಾವುದೇ ಆನ್ ಲೈನ್ ಅಥವಾ ಸೈಬರ್ ಅಪರಾಧಗಳಾದಾಗ ಸಂಬಂಧಿಸಿದವರಿಗೆ ಕರೆಮಾಡಿ ದೂರು ದಾಖಲಿಸಬಹುದು. ಅಲ್ಲದೆ ಯಾವುದೇ ಬ್ಯಾಂಕ್‌ಗಳು ಕರೆ ಮಾಡಿ ಓಟಿಪಿಯನ್ನು ಕೇಳುವುದಿಲ್ಲ. ಯಾರಿಗೂ ಅನಗತ್ಯ ಒಟಿಪಿ ನೀಡುವ ಕೆಲಸವನ್ನು ಮಾಡಬೇಡಿ. ಪ್ರತಿಯೊಬ್ಬರೂ ಸ್ಮಾರ್ಟ್ಫೋನ್ ಬಳಸುತ್ತಿದ್ದಾರೆ. ಬಳಸುವ ಪ್ರತಿಯೊಬ್ಬರಿಗೂ ಸುರಕ್ಷಿತ ಬಳಕೆಯ ಬಗ್ಗೆ ಸರಿಯಾದ ಮಾಹಿತಿ ಇರುವುದಿಲ್ಲ. ಸದ್ಯ ಕಚೇರಿ ಕೆಲಸಗಳನ್ನು ಕುಳಿತಲ್ಲಿಂದಲೇ ಮಾಡುವ ಪರಿಣತಿಯನ್ನು ಹೊಂದಿದ ಬಳಕೆದಾರರು ಅನೇಕರಿದ್ದಾರೆ. ಅಷ್ಟರ ಮಟ್ಟಿಗೆ ಇಂಟರ್‌ನೆಟ್ ಬಳಕೆ ಮತ್ತು ಅದರ ಉಪಯೋಗವಾಗುತ್ತಿದೆ. ಆದರೆ ಇಷ್ಟೆಲ್ಲ ಲಾಭದ ಮಧ್ಯೆಯೂ ತೊಂದರೆಯೂ ಇದೆ ಹೇಳಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ ಹಾಗೂ ಪೊಲೀಸ್ ಇಲಾಖೆಯ ಸೈಬರ್ ಘಟಕದ ನಿರ್ದೇಶಕ ರವಿಶೇಖರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು, ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಕೃಷ್ಣ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ಕ್ಷಯ ಮತ್ತು ಏಡ್ಸ್ ನಿಯಂತ್ರಣಾಧಿಕಾರಿ ಡಾ.ಮಹ್ಮದ್ ಶಾಕೀರ ಮೊಹಿಯುದ್ದೀನ್, ಸೈಬರ್ ಘಟಕದ ಪೊಲೀಸ್ ಇನ್‌ಸ್ಪೆಕ್ಟರ್ ರಾಜಕುಮಾರ ಸೇರಿದಂತೆ ಇತರರು ಇದ್ದರು.

# ಪುರಾಣ-ಪ್ರವಚನಗಳಿಂದ ಮಾನಸಿಕ ನೆಮ್ಮದಿ




ಮಲ್ಲಮನುಡಿವಾರ್ತೆ:ಫೆ.12: ಇಂದಿನ ಆಧುನಿಕ ವಿಜ್ಞಾನ ಹಾಗೂ ತಂತ್ರಜ್ಞಾನದ ಯುಗದಲ್ಲಿ ಮನುಷ್ಯ ಒತ್ತಡದ ಬದುಕಿನಿಂದಾಗಿ ಆರೋಗ್ಯ ಹಾಗೂ ಮಾನಸಿಕ ನೆಮ್ಮದಿಗಳೆರಡನ್ನೂ ಕಳೆದುಕೊಂಡಿದ್ದಾನೆ, ಆರೋಗ್ಯವಂತ ದೇಹದಲ್ಲಿ ಮಾತ್ರ ಸದ್ ವಿಚಾರಗಳು ನೆಲೆಸಲು ಸಾಧ್ಯ ಆದ್ದರಿಂದ ನಾವೆಲ್ಲರೂ ಮಾನಸಿಕ ನೆಮ್ಮದಿಗಳಿಸಲು ಇಂತಹ ಆಧ್ಯಾತ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಅಗತ್ಯವಾಗಿದೆ ಎಂದು ಖ್ಯಾತ ನೇತ್ರತಜ್ಞ,ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು. ತಾಲೂಕಿನ ನಾವದಗಿ ಗ್ರಾಮದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಪೀಠದ ಶಾಖಾ ಮಠ ರಾಜಗುರು ಶ್ರೀ ಪರ್ವತೇಶ್ವರ ಬ್ರಹನ್ಮಠದಲ್ಲಿ ರಂಭಾಪುರಿ ಹಾಗೂ ಕೇದಾರ ಜಗದ್ಗುರುಗಳ ಅಡ್ಡ ಪಲ್ಲಕ್ಕಿ ಮಹೋತ್ಸವ ಹಾಗೂ ಬ್ರಹನ್ಮಠದ ಪರಮ ಪೂಜ್ಯಶ್ರೀ ಷ.ಬ್ರ.ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರ ಗುರು ಪಟ್ಟಾಧಿಕಾರದ ಪ್ರಥಮ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡ ಮಹಾಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮನ ಪುರಾಣ ಆರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ದೇವರ ಹಿಪ್ಪರಗಿಯ ಪೂಜ್ಯಶ್ರೀ ಶಿವಯೋಗಿ ಶಿವಾಚಾರ್ಯರು ಹಾಗೂ ಮನಗೂಳಿಯ ಪೂಜ್ಯ ಶ್ರೀಅಭಿನವ ಸಂಗನಬಸವ ಶಿವಾಚಾರ್ಯರು ಸಮ್ಮುಖ ವಹಿಸಿ ಆಶೀರ್ವಚನ ನೀಡಿದರು.ಸಮಾರಂಭದ ಸಾನಿಧ್ಯ ವಹಿಸಿದ ಕೊಡೆಕಲ್ಲ ದುರದುಂಡೇಶ್ವರ ವಿರಕ್ತಮಠದ ಪೂಜ್ಯ ಶ್ರೀ ಶಿವಕುಮಾರ ಮಹಾಸ್ವಾಮಿಗಳು ತಮ್ಮ ಆಶೀರ್ವಚನದಲ್ಲಿ ನಾವದಗಿಯ ಪೂಜ್ಯರು ಈ ಭಾಗದ ಭಕ್ತರನ್ನು ಸಂಸ್ಕರಿಸಲು ಸಾಕಷ್ಟು ಧರ್ಮ ಸೇವೆಯನ್ನು ಮಾಡುತ್ತಿದ್ದಾರೆ, ಕಳೆದ ಬಾರಿ ನೀವೆಲ್ಲರೂ ಸೇರಿ ಅವರ ಪಟ್ಟಾಧಿಕಾರದ ಕಾರ್ಯಕ್ರಮವನ್ನು ಅವಿಸ್ಮರಣೀಯವನ್ನಾಗಿ ಮಾಡಿದ್ದೀರಿ ಈ ವರ್ಷವೂ ಸಹ ಅಷ್ಟೇ ಅಭಿಮಾನ ಹಾಗೂ ಉತ್ಸಾಹದೊಂದಿಗೆ ಈ ಕಾರ್ಯಕ್ರಮವನ್ನೂ ಯಶಸ್ವಿಗೊಳಿಸಲು ಪ್ರಯತ್ನಿಸಿ ಈ ಕಾರ್ಯಕ್ರಮದಲ್ಲಿ ಇಬ್ಬರು ಜಗದ್ಗುರುಗಳು ಆಗಮಿಸುತ್ತಿದ್ದಾರೆ ಇದು ನಿಮ್ಮೆಲ್ಲರ ಸೌಭಾಗ್ಯವಾಗಿದೆ ಎಂದರು. ಶ್ರೀ ಮಡಿವಾಳೇಶ್ವರ ಹಿರೇಮಠ ಸಾಸನೂರ-ತುಂಬಗಿಯ ಪೂಜ್ಯ ಶ್ರೀ ಮಹಾಂತಲಿಂಗ ಶಿವಾಚಾರ್ಯರು ದಿವ್ಯಸಾನಿಧ್ಯ ವಹಿಸಿದ್ದರು. ಜ್ಯೋತಿಷ್ಯರತ್ನ ಪರಮಪೂಜ್ಯಶ್ರೀರಾಮಲಿಂಗಯ್ಯ ಮಹಾಸ್ವಾಮಿಗಳು ನೇತೃತ್ವ ವಹಿಸಿದ್ದರು.ಶ್ರೀ ಷ.ಬ್ರ. ರಾಜಗುರು ರಾಜೇಂದ್ರ ಒಡೆ-ಯರ ಶಿವಾಚಾರ್ಯರು ಗೌರವ ಉಪಸ್ಥಿತಿ ವಹಿಸಿದ್ದರು. ಪ್ರವಚನಕಾರ ವೇ.ಮೂ.ಬಸಯ್ಯ ಸ್ವಾಮಿಗಳು ಸೋಮೇಶ್ವರ ಮಠ ಯಾಳಗಿ,ಸಾಹಿತಿ ಶಿಕ್ಷಕ ಬಸವರಾಜ್ ಗೊರಜಿ, ಗಾನ ಕೋಗಿಲೆ ವೀರೇಶ ಕೆಂಭಾವಿ,ತಬಲಾವಾದಕ ಪ್ರವೀಣ ಪತ್ತಾರ ಗ್ರಾಮದ ಗಣ್ಯರು ಹಿರಿಯರು ಹಾಗೂ ಶ್ರೀಮಠದ ಅಪಾರ ಭಕ್ತರು ಇದ್ದರು.

# ರಾಮಪೂರ ಜಿ. ಸರಕಾರಿ ಶಾಲೆಯಲ್ಲಿ ಮೃಷ್ಟಾನ್ನ ಭೋಜನ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಫೆ.12:ಗುರುಮಿಟಕಲ್ ತಾಲೂಕಿನ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ರಾಮಪೂರ ಜಿ. ಶಾಲೆಯಲ್ಲಿ ಮುಖ್ಯಗುರುಗಳು ತಮ್ಮ ವೈಯಕ್ತಿಕ ಖರ್ಚಿನಿಂದ ಮಕ್ಕಳಿಗೆ ಹೋಳಿಗೆ ಊಟ ಮಾಡಿಸಿದರು. ಶಿಕ್ಷಕರೆಲ್ಲರೂ ಸೇರಿ ತಮ್ಮ ಕೈಯಾರೆ ಹೋಳಿಗೆ ಮಾಡಿ ಮಕ್ಕಳಿಗೆ ಬಡಿಸಿದರು.

ಗುರುಮಠಕಲ್ ತಾಲೂಕಿನ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ರಾಮಪೂರ ಜಿ. ಶಾಲೆಯ ಪ್ರಭಾರಿ ಮುಖ್ಯಗುರುಗಳಾದ ಕು.ಮಲ್ಲಿಕಾರ್ಜುನ ಸರ್ ಅವರು ಮಕ್ಕಳಿಗೆ ಮಾತು ಕೊಟ್ಟಂತೆ ಶಾಲೆಯಲ್ಲಿ ಹೋಳಿಗೆ ಊಟ ಮಾಡಿಸಿ ಮಕ್ಕಳ ಮೇಲಿನ ಮಮತೆಯನ್ನು ಮೆರೆದಿದ್ದಾರೆ.

ಶಾಲಾ ಮಕ್ಕಳು ವಿಭಾಗಮಟ್ಟದ ಥ್ರೋಬಾಲ್ ಕ್ರೀಡಾಕೂಟದಲ್ಲಿ ಸೆಮಿಫೈನಲ್ ತಲುಪಿದ್ದರು ಈ ಸಾಧನೆಯನ್ನು ಮಾಡಿದ ರಾಮಪೂರ ಶಾಲೆಯ ಮೊದಲ ವಿದ್ಯಾರ್ಥಿಗಳು ಎಂಬ ಇತಿಹಾಸವನ್ನು ನಿರ್ಮಿಸಿದ್ದರು. ಆದ್ದರಿಂದ ಸಂತುಷ್ಟಗೊಂಡ ಮುಖ್ಯ ಗುರುಗಳು ಶಾಲೆಯಲ್ಲಿ ನಿಮಗೆ ಇಷ್ಟವಾದ ತಿನಿಸನ್ನು ನಾನು ಶಾಲೆಯಲ್ಲಿ ಮಾಡಿಸುವುದಾಗಿ ಹೇಳಿದ್ದರು ಅದರಂತೆ ಮಂಗಳವಾರ ಹೋಳಿಗೆ ಊಟ ಮಾಡಿಸಿದರು.

ಶಾಲಾ ಸಹ ಶಿಕ್ಷಕರಾದ ಕು.ಶರಣಪ್ಪ ಸರ್ ಅ.ಶಿಕ್ಷಕರಾದ ಶ್ರೀ ಮಾರುತಿ, ಶ್ರೀ ಗಾಲೆಪ್ಪ, ಶಿವಶರಣ ಸರ್ ಅವರು ಹೂರಣ ರುಬ್ಬುವುದರಿಂದ ಹಿಡಿದು ಅಡುಗೆಗೆ ಬೇಕಾದ ಎಲ್ಲಾ ಸಹಾಯವನ್ನು ಮಾಡಿದರು.

ಸಹ ಶಿಕ್ಷಕಿಯಾದ ಶ್ರೀಮತಿ ಪ್ರತಿಮಾ ಹಾಗೂ ಅತಿಥಿ ಶಿಕ್ಷಕೀಯರಾದ ಶರಣಮ್ಮ, ರಾಚಮ್ಮ,ರೋಹಿಣಿ,ಮಲ್ಲಮ್ಮ ಮೇಡಮ್ ಅವರು ತಮ್ಮ ಕೈಯಾರೆ ಹೋಳಿಗೆ ಮಾಡಿ ಮಕ್ಕಳಿಗೆ ಬಡಿಸಿದರು.

ಇದರೊಂದಿಗೆ ಶಾಲೆಯಲ್ಲಿ ಹಬ್ಬದ ವಾತವರಣ ನಿರ್ಮಿಸಿ ಶಾಲಾ ಹಂತದ ಕಲಿಕಾ ಹಬ್ಬವನ್ನು ,ಜಾನಪದ ಜಾತ್ರೆಯನ್ನು ಆಚರಿಸಿ ಮಕ್ಕಳೆಲ್ಲರೂ ಸಂಭ್ರಮಿಸಿದರು.

# ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆಸಕ್ತಿ ವಹಿಸಿ



ತಾಳಿಕೋಟಿ:ಫೆ.12: ಮಕ್ಕಳು ಒಂದು ಸಮುದಾಯದ ಭವಿಷ್ಯವನ್ನು ನಿರ್ಣಯಿಸುತ್ತಾರೆ,ಅವರಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವುದು ಅಗತ್ಯವಾಗಿದೆ. ಇದರ ಕುರಿತು ಪಾಲಕರು ಯಾವ ಕಾರಣಕ್ಕೂ ನಿಷ್ಕಾಳಜಿ ತೋರಬಾರದು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಸಲಹೆ ನೀಡಿದರು. ಪಟ್ಟಣದ ಟಿಪ್ಪುನಗರ ಮೈದಾನದಲ್ಲಿ ಮಂಗಳವಾರ ಸಂಜೆ ಅಲ್-ಹುದಾ ಶಿಕ್ಷಣ ಸಂಸ್ಥೆಯ ಇಕ್ರಾ ಉರ್ದು ಪ್ರಾಥಮಿಕ ಹಾಗೂ ಪ್ರೌಢಶಾಲೆ ಇದರ 18ನೇ ವಾರ್ಷಿಕೋತ್ಸವ ಅಂಗವಾಗಿ ಹಮ್ಮಿಕೊಂಡ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ 18 ವರ್ಷಗಳಿಂದ ಸಮುದಾಯದ ಮಕ್ಕಳಿಗೆ ಶಿಕ್ಷಣವನ್ನು ನೀಡುತ್ತಿರುವ ಈ ಸಂಸ್ಥೆಯ ಕಾರ್ಯಾ ಶ್ಲಾಘನೀಯ, ಸಂಸ್ಥೆಯ ಅಧ್ಯಕ್ಷರು ಶಿಕ್ಷಕರು ಸಾಮಾಜಿಕ ಕಳಕಳಿಯೊಂದಿಗೆ ಕೆಲಸ ಮಾಡುತ್ತಿದ್ದಾರೆ ಇವರಿಗೆ ಸಮುದಾಯದ ಸಹಕಾರ ಇರಲಿ ಎಂದರು. ಶಿಕ್ಷಕ ಸಾಹೇಬಗೌಡ ಬಿರಾದಾರ ಮಾತನಾಡಿ ಇದೊಂದು ಉರ್ದು ಶಾಲೆಯಾಗಿದ್ದರೂ ಇಲ್ಲಿಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆ ಕುರಿತು ಇರುವ ಅಭಿಮಾನ ನಿಜಕ್ಕೂ ಮೆಚ್ಚುವಂತದ್ದು, ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಬೆಳೆಸುವುದು ಅತಿ ಕಷ್ಟದ ಕೆಲಸವಾಗಿದೆ ಇಂತಹದರಲ್ಲಿ 18 ವರ್ಷಗಳಿಂದ ಈ ಸಂಸ್ಥೆ ನಡೆಸಿಕೊಂಡು ಬರುತ್ತಿರುವುದು ಅತಿ ದೊಡ್ಡ ಸಾಧನೆಯಾಗಿದೆ ಈ ಸಂಸ್ಥೆ ಇನ್ನೂ ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದರು. ಎಐಎಂಐಎಂ ವಿಜಯಪುರ ಜಿಲ್ಲಾ ಅಧ್ಯಕ್ಷ ಅಲ್ಲಾಭಕ್ಷ ಬಿಜಾಪೂರ ಮಾತನಾಡಿದರು. ಅಲ್-ಹುದಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಹಮ್ಮದ ಸಾಬ ಐ.ಕೆಂಭಾವಿ,ನಿವೃತ್ತ ಶಿಕ್ಷಕ ಅಬ್ದುಲ್ ರಜಾಕ ಕೆಂಭಾವಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಎಸ್.ಎಸ್. ಎಲ್.ಸಿ. ವಿದ್ಯಾರ್ಥಿಗಳಿಗೆ ಹೃದಯಸ್ಪರ್ಶಿಯಾಗಿ ಬೀಳ್ಕೋಡಲಾಯಿತು. 12 ಪ್ರತಿಭಾವಂತ ವಿದ್ಯಾರ್ಥಿಗಳಿಗೆ, ಶಿಕ್ಷಣ ಸಂಸ್ಥೆಯಲ್ಲಿ ಕಲಿತು ವಿವಿಧ ರಂಗಗಳಲ್ಲಿ ಸೇವಿಸಲ್ಲಿಸುತ್ತಿರುವವರಿಗೆ ಹಾಗೂ ಸಂಸ್ಥೆಯಿಂದ ಆದರ್ಶ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಎಸ್.ಎಂ.ಬೇಪಾರಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯಲ್ಲಿ ಪುರಸಭೆ ಅಧ್ಯಕ್ಷೆ ಜುಬೇದಾ ಹುಸೇನಬಾಷಾ ಜಮಾದಾರ,ಮಾಜಿ ಉಪಾಧ್ಯಕ್ಷ ಮಾಸೂಮಸಾಬ ಕೆಂಭಾವಿ,ಕಸಾಪ ಅಧ್ಯಕ್ಷ ಆರ್.ಎಲ್. ಕೊಪ್ಪದ, ಎಂಸಿಸಿ ಬ್ಯಾಂಕ್ ಅಧ್ಯಕ್ಷ ಚಾಂದಹುಸೇನ ಖಾಂಜಾದೆ, ಕರವೇ ಜಿಲ್ಲಾ ಕಾರ್ಯದರ್ಶಿ ಜೈಭೀಮ ಮುತ್ತಗಿ, ವಿಕೆಎಚ್ ಕಾರ್ಯದರ್ಶಿ ಮಾಧೂರಿ ಪ.ಹಜೇರಿ,ಪತ್ರಕರ್ತ ಅಬ್ದುಲ್ ಗನಿ ಮಕಾನದಾರ,ಕಾಸೀಮ್ ಅಲಿ ಮನ್ಸೂರ, ಸರಫರಾಜ್ ಎಂ, ಮಹಮ್ಮದ್ ಶಫೀಕ ಇನಾಮದಾರ,ಮೈನುದ್ದೀನ್ ಸಿಪಾಯಿ,ಅಲ್ಲಾಭಕ್ಷಲಾಹೋರಿ, ಮಹೆಬೂಬ್ ಬಿಸ್ತಿ,ಇಮಾಮಸಾಬ ಚೌದ್ರಿ,ಮುಖ್ಯ ಶಿಕ್ಷಕ ಜಾವೀದ ಎಂ.ಕೆಂಭಾವಿ,ಪ್ರೌಢಶಾಲೆ ಸಂಚಾಲಕ ಸಲಾವುದ್ದೀನ ಇರ್ಫಾನ್ ಖಾಜಿ ಸಿಬ್ಬಂದಿಗಳಾದ ಶ್ರೀಮತಿ ಬಿ. ಎಲ್.ಬಿರಾದಾರ,ಎಂ.ಎಂ .ಕೆಂಭಾವಿ,ಜೆ.ಎಚ್.ಮುಲ್ಲಾ,ಟಿ. ಎಂ. ಜಕಾತಿ,ಎಂ.ಎ.ಕಟಗಿ, ಎಂ.ಎ.ಪಟ್ಟೇವಾಲೆ,ಎನ್.ಎಂ. ಬಲಶಟ್ಟಿಹಾಳ ವಿದ್ಯಾರ್ಥಿಗಳು ಹಾಗೂ ಪೋಷಕರು ಇದ್ದರು

# ಫೆ.17 ರಂದು ಪೂರ್ವಭಾವಿ ಸಭೆ

ಯಾದಗಿರಿ : ಫೆ 12 : ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು 2025ರ ಫೆಬ್ರವರಿ 19 ರಿಂದ 20ರ ವರೆಗೆ ಕಲಬುರಗಿ ವಿಭಾಗದ ಕಲಬುರಗಿ, ಯಾದಗಿರಿ ಮತ್ತು ಬೀದರ ಜಿಲ್ಲೆಯ ಜಿಲ್ಲಾ ಮಟ್ಟದ ಸಭೆಯನ್ನು ನಿಗದಿಪಡಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನಾರಾಯಣಕರ್ ಅವರು ತಿಳಿಸಿದ್ದಾರೆ.

ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು 2025ರ ಫೆಬ್ರವರಿ 19 ರಿಂದ 20ರ ವರೆಗೆ ಕಲಬುರಗಿ ವಿಭಾಗದ ಕಲಬುರಗಿ, ಯಾದಗಿರಿ ಮತ್ತು ಬೀದರ ಜಿಲ್ಲೆಯ ಜಿಲ್ಲಾ ಮಟ್ಟದ ಸಭೆಯನ್ನು ನಿಗದಿಪಡಿಸಲಾಗಿದೆ. ಹಿನ್ನೆಲೆ ಪೂರ್ವಭಾವಿ ಸಭೆಯು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಅಧ್ಯಕ್ಷತೆಯಲ್ಲಿ ಇದೇ 2025ರ ಫೆಬ್ರವರಿ 17ರ ಸೋಮವಾರ ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆಯಲಿದೆ. ಈ ಸಭೆಗೆ ತಮ್ಮ ಇಲಾಖೆಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳು ನಿಗದಿತ ನಮೂನೆಯಲ್ಲಿ ಮಾಹಿತಿಯೊಂದಿಗೆ ಹಾಜರಾಗಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಭವಿಷ್ಯದ ಜೀವನ ರೂಪಿಸಿ ಕೊಂಡು ಯಶಸ್ವಿಯಾಗಿ: ಮಹೇಂದ್ರಕರ



ಮಲ್ಲಮ್ಮನುಡಿ ವಾರ್ತೆ. ಬಸವಕಲ್ಯಾಣ:-ಫೆ12. ತಾಲೂಕಿನ ನಾರಾಯಣಪುರ ಸರ್ಕಾರಿ ಪ್ರೌಢ ಶಾಲೆಯ 2007-08ನೇ ಸಾಲಿನಲ್ಲಿ ಎಸ್. ಎಸ್. ಎಲ್. ಸಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ 'ಗುರುವಂದನಾ' ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಆ ಸಂದರ್ಭದಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರಾದ ಸುಧಾಕರ ಮಹೇಂದ್ರ ಮಾತನಾಡಿ ವಿದ್ಯಾರ್ಥಿಗಳಿಗೆ ತಮ್ಮ ಶಾಲಾ ದಿನಗಳಲ್ಲಿ ಶಿಕ್ಷಕರು ಬರಿ ದಂಡನೆ ನೀಡುವ ವ್ಯಕ್ತಿಯಾಗಿ ಕಾಣುತ್ತಾರೆ. ಬೆಳೆದು ದೋಡ್ಡವರಾದಂತೆ.ಜೀವನದ ವಿವಿಧ ಸಂದರ್ಭಗಳಲ್ಲಿ ಶಿಕ್ಷಕರ ಮಾತುಗಳನ್ನು ನೆನಪಿಸಿಕೆಣಟಿಜಜಜಿಟಿಜಜಳ್ಳುತ್ತಾರೆ. ಶಿಕ್ಷಕರ ಮಾರ್ಗದರ್ಶನದಂತೆ ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಜೀವನ ರೂಪಿಸಿಂಡು ಯಶಸ್ವಿಯಾದರೆ ಅದುವೆ ಶಿಕ್ಷಕರಿಗೆ ತೃಪ್ತಿ ನೀಡುತ್ತದೆ. ಎಂದು ನುಡಿದರು. ಶಿಕ್ಷಕ ನಾಗಪ್ಪ ನಿಣ್ಣೆ ಮಾತನಾಡಿ ಈ ಕಾರ್ಯಕ್ರಮದ ಮೂಲಕ ಎಲ್ಲೆಲ್ಲೂ ಹರಿದು ಹಂಚಿಹೆಣಟಿಜಜಜಿಟಿಜಜದ ಶಿಕ್ಷಕರಿಗೆ,ಸಹಪಾಠಿಗಳಿಗೆ ಒಂದೆಡೆ ಸೇರಿಸಿ ಬಾಲ್ಯದ ದಿನಗಳನ್ನು ಸ್ಮರಿಸುವಂತಾಗಿದೆ. ಈ ಕಾರ್ಯಕ್ರಮವು ಮತ್ತೆಣಟಿಜಜಜಿಟಿಜಜಬ್ಬರಿಗೆ ಪ್ರೇರಣೆ ನಿಡುವಂತಿದೆ ಎಂದರು. ಜ್ಞಾನರಡ್ಡಿ ಬೊಗಲೆ ಮಾತನಾಡಿ ಗುರು ಶಿಷ್ಯರನ್ನು ಒಟ್ಟಿಗೆ ಸೇರಿಸಿ ಉತ್ತಮ ಸಮಾರಂಭ ಹಮ್ಮಿಂಡಿದಕೆ ಅಭಿನಂದಿಸಿದರು.ದೇವಿಂದ್ರ ಬರಗಾಲೆ,ವಿದ್ಯಾರ್ಥಿಗಳಾದ ಮಹಾದೇವರಡ್ಡಿ,ಮಹೇಶ, ಆಕಾಶ, ಶಿಲ್ಪಾ ರೆಡಿ, ಅಶ್ವಿನಿ, ಮಾತನಾಡಿದರು. ಈ ಸಂದರ್ಭದಲ್ಲಿ ಪ್ರೌಢಶಾಲೆಮುಖ್ಯೋಪದ್ಯಾಯರಾದ ಉಮಾ ಕುಲಕರ್ಣಿ ಅಧ್ಯಕ್ಷತೆಯಹಿಸಿದ್ದರು.ಪ್ರಾಥಮಿಕಶಾಲೆ ಮುಖ್ಯೋಪದ್ಯಾಯರಾದರವಿ ಪವಾರ,ಎಸ್.ಡಿ.ಎಮ್.ಸಿ ಅಧ್ಯಕ್ಷ ಪ್ರೇಮಕುಮಾರ ಬಿರಾದಾರ,ಶಿಕ್ಷಕಿ ನಾಗಮ್ಮ ಭೂರೆ, ಇಂದುಮತಿ ಸಿಗೆದಾರ,ಅಫರೋಜ್ ಬೇಗಂ, ಅನಿತಾ ಪಾಠಕ್,ನೀಲಾವತಿ,ಶಿವಾನಂದ ಪೂಜಾರಿ, ಸಾವಿತ್ರಮ್ಮ, ಕಲ್ಯಾಣಿ ಭಾಸ್ಕರ್, ವಿಷ್ಣು ಜಮಾದಾರ, ಜಗತಾಪ ನಿಂಬೋಣೆ,ದಂಮಯತಿ ಮೈಸೆ,ವಿಧ್ಯಾರ್ಥಿಗಳಾದ ಪವನ್ ಸ್ವಾಮಿ, ವೆಂಕಟ ರೇಕುಳಗೆ,ಸತೀಶ್ ಕುಂಬಾರ, ಬಬ್ರುವಾಹನ, ಗುರಪ್ಪ ರೇಕುಳಗೆ,ಚಾಮುಂಡೇಶ್ವರಿ, ವಂದನಾ , ನಿಕಿತಾ, ಶಾಂತಕುಮಾರ್ ಬಿರಾದಾರ, ಮುಂತಾದವರು ಸೇರಿದಂತೆ ಅನೇಕರು

ಉಪಸ್ಥಿತರಿದ್ದರು. ಸಂಜೀವಿನಿ ದೇವಿದಾಸ ಪ್ರಾರ್ಥನೆ. ಮಹೇಶ ಗೆಣಟಿಜಜಜಿಟಿಜಜರ್ಟೆ ನಿರೂಪಿಸಿದರು, ಆಕಾಶ ಸ್ವಾಗತಿಸಿದರು, ಪ್ರಿಯಾ ಬಾಬುರಡ್ಡಿ ವಂದಿಸಿದರು.

# 8 ನೇ ತರಗತಿಯ ಮಕ್ಕಳಿಗೆ ಬಿಳ್ಕೊಡುಗೆ ಹಾಗೂ ಶಾಲಾ ವಾರ್ಷಿಕೋತ್ಸವ




ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :- ಫೆ 12.ಶಾಲೆಗೆ ಹಾಜರಾದ ಮಕ್ಕಳನ್ನು ಕೊನೆಯವರೆಗೂ ಹಾಜರಾಗಿರುವಂತೆ ನೋಡಿಕೊಳ್ಳುವ ಜವಾಬ್ದಾರಿ ಪಾಲಕರದು ಹಾಗೂ ಶಾಲಾಭಿವೃದ್ಧಿ ಸಮಿತಿಯವರ ಜವಾಬ್ದಾರಿಯಾಗಿರುತ್ತದೆ ಎಂದು

ಕ್ಷೇತ್ರಶಿಕ್ಷಣಾಧಿಕಾರಿಗಳಾದ ಸಿದ್ದವೀರಯ್ಯರುದ್ನೂರ್ ಹೇಳಿದರು. ಹುಲಸೂರ ತಾಲೂಕಿನ ತೊಗಲೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ 8ನೇ ತರಗತಿಯ ಮಕ್ಕಳಿಗೆ ಬಿಳ್ಕೋಡುಗೆ ಹಾಗೂ ಶಾಲಾ ವಾರ್ಷಿಕೋತ್ಸವ ಸಮಾರಂಭದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಇಂದಿನ ದಿವಸದಲ್ಲಿ ಶಾಲೆಗೆ ದಾಖಲಾದಂತಹ ಮಕ್ಕಳು ಗೈರಾಗುತ್ತಿದ್ದು ಇದರಿಂದ ಕಲಿಕೆಯಲ್ಲಿ ಹಿಂದುಳಿಯುತ್ತಿದ್ದಾರೆ. ಹಾಗಾಗಿ ಶಾಲೆಗೆ ದಾಖಲಾದ ಮಕ್ಕಳನ್ನು ಕಡ್ಡಾಯವಾಗಿ ಹಾಜರಾಗುವಂತೆ ಪಾಲಕ ಪೋಷಕರು ಹಾಗೂ ಶಾಲಾಭಿವೃದ್ಧಿ ಸಮಿತಿಯವರು ಜವಾಬ್ದಾರಿಯನ್ನು ವಹಿಸಿಕೊಂಡು ಪ್ರತಿನಿತ್ಯ ಶಾಲೆಗೆ ಬರುವಂತಹ ವ್ಯವಸ್ಥೆಯನ್ನು ಮಾಡಿಕೊಳ್ಳುವುದು ಅತ್ಯುತ್ತಮ. ಊರಿನ ಜನರ ಸಹಕಾರ ಇದ್ದಾಗ ಮಾತ್ರ ಒಂದು ಸರ್ಕಾರಿ ಶಾಲೆಯನ್ನು ಅಭಿವೃದ್ಧಿಪಡಿಸಲು ಸಾಧ್ಯ ಹಾಗಾಗಿ ನಮ್ಮ ಇಲಾಖೆಗೆ ಹಾಗೂ ಈ ಶಾಲೆಗೆ ತಮ್ಮ ಸಹಕಾರವನ್ನು ಕೋರುವೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷರಾದ ನಾಗರಾಜಹಾವಣ್ಣಾಮಾತನಾಡಿ , ತಂದೆ ತಾಯಿ ಹತ್ತಿರ ಮೊದಲು ನನ್ನ ಮಗು ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದಾನೆ ಎಂಬ ಹೆಮ್ಮೆ ನಮಗಿರಬೇಕು ಎಂದು ಹೇಳಿದರು. ಆವಾಗ ಮಾತ್ರ ಆ ಮಗುವಿನಲ್ಲಿ ಸರ್ಕಾರಿ ಶಾಲೆಯ ಬಗ್ಗೆ ಧನಾತ್ಮಕ ಚಿಂತನೆಯನ್ನು ಬಂದು ತಾನು ಕಲಿತು ಒಂದು ಒಳ್ಳೆಯ ಹುದ್ದೆಯಲ್ಲಿ ಹೋಗಬೇಕೆಂಬ ಆಶಾಭಾವನೆ ಮೂಡುತ್ತದೆ ಎಂದರು.

2024-29ನೇ ಸಾಲಿಗಾಗಿ ಕರ್ನಾಟಕ ರಾಜ್ಯ ಸರ್ಕಾರ ನೌಕರರ ಸಂಘದ ಚುನಾವಣೆಯಲ್ಲಿ ಪ್ರಚಂಡ ಬಹುಮತದಿಂದ ಜಯವನ್ನು ಸಾಧಿಸಿದ ಅಧ್ಯಕ್ಷರನ್ನು ಪದಾಧಿಕಾರಿಗಳನ್ನು ನಿರ್ದೇಶಕರನ್ನ. ಸಹಕಾರ ನೀಡಿದ ಹಾಗೂ ಶಾಲೆಗೆ ಕಾಣಿಕೆ ನೀಡಿದ ಪಾಲಕ ಪೋಷಕರನ್ನ ಶಾಲೆ ವತಿಯಿಂದ ಗೌರವ ಸನ್ಮಾನ ಮಾಡಲಾಯಿತು.

ಗ್ರಾಮಸ್ಥರಿಂದ ಶಾಲಾ ಮುಖ್ಯಗುರುಗಳಿಗೆ ಹಾಗೂ ಸಿಬ್ಬಂದಿ ವರ್ಗದವರನ್ನು ಗೌರವ ಸನ್ಮಾನಿಸಲಾಯಿತು

ಕಾರ್ಯಕ್ರಮದ ಅಧ್ಯಕ್ಷತೆ ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷೆ ಲಕ್ಷ್ಮಿಬಾಯಿ ಹಂದಿಕೆರೆ, ಗ್ರಾಮ ಪಂಚಾಯಿತ ಅಧ್ಯಕ್ಷರಾದ ಧಬಾಲೆ, ಅತಿಥಿ ರಾಜ್ಯ ಪರಿಷತ್ ಸದಸ್ಯರಾದ ಭೀಮಶಂಕರ ಆದೇಪ್ಪಾ, ಶಾಲುಬಾಯಿ ಪಾಟೀಲ್ ಎಸ್ಸಿ.ಎಸ್ಟಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಡಾ.ಧರ್ಮೇಂದ್ರ ಬೋಸ್ಲೆ, ಪ್ರಾಥಮಿಕ ಶಾಲಾ ಶಿಕ್ಷಕರ ಜಿಲ್ಲಾ ಕೋಶಾಧ್ಯಕ್ಷರಾದ ಅಲ್ಲಾವುದ್ದೀನ್ ಪಟೇಲ್ ಸಿಆರ್‌ಪಿಯಾದ ಶಂಕ್ರಯ್ಯ ಸ್ವಾಮಿ, ಶರಣಬಸಪ್ಪ ಪಾಟೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸ್ವಾಗತ ಮತ್ತು ಪ್ರಾಸ್ತಾವಿಕ ಮುಖ್ಯ ಗುರುಗಳಾದ ಶಿವಕುಮಾರ ಚಿಂಚೋಳೆ, ವಂದಿಸಿದರು. ಸಹ ಶಿಕ್ಷಕರಾದ ಲಕ್ಷ್ಮಿಕಾಂತ,ರೂಪಾವತಿ ಸಹ ಶಿಕ್ಷಕಿ ನಿರೂಪಿಸಿದರು.

# ಫೆ.14ರಂದು ಹೆಚ್.ಟಿ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ. ರಾಯಚೂರು. ಫೆ 12: ಇಲ್ಲಿನ ಜೆಸ್ಕಾಂ ಇಲಾಖೆಯಿಂದ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಜೆಸ್ಕಾಂ ಉಪ-ವಿಭಾಗಗಳ ಹೆಚ್.ಟಿ ಗ್ರಾಹಕರೊಂದಿಗೆ ಸಂವಾದ ಸಭೆಯನ್ನು ಫೆ.14ರ ಬೆಳಿಗ್ಗೆ 11ಗಂಟೆಗೆ ವೃತ್ತ ಕಚೇರಿಯಲ್ಲಿ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ನಡೆಸಲು ನಿಗದಿಪಡಿಸಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

